# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 271 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:21–05–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 271 | RNI No: KARKAN/2023/88462 | KA/SK/CTA-874/2024-2026 | Chitradurga | Date: 21-05-2025 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಈರುಳ್ಳಿ ಬೀಜ ಮಾರಾಟಕ್ಕೆ ಕಡ್ಡಾಯ ಪರವಾನಿಗೆಪಡೆಯಬೇಕು: ವಿರೂಪಾಕ್ಷಪ್ಪ 2

ಆಪರೇಷನ್ ಸಿಂಧೂರ ಯಶಸ್ವಿ ಹಿನ್ನೆಲೆ: 500 ಮೀಟರ್ ರಾಷ್ಟ್ರಧ್ವಜ ಮೆರವಣಿಗೆ 3

ರಾಷ್ಟ್ರ ಅಥವಾ ದೇಶ ಎಂದರೇನು? 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡದಂತೆ ಸೂಚನೆ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಅಧಿಕೃತ ಪರವಾನಿಗೆ ಪಡೆದಿರುವ ರಸಗೊಬ್ಬರ ಮಾರಾಟಗಾರರು ಯಾವುದೇ ಸಂದರ್ಭದಲ್ಲಿ ರಸಗೊಬ್ಬರಗಳ ಚೀಲದ ಮೇಲೆ ಮುದ್ರಿತವಾದ ಗರಿಷ್ಠ ಬೆಲೆಗಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರಗಳನ್ನು ಮಾರಾಟ ಮಾಡಬಾರದು ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ಸೂಚನೆ ನೀಡಿದ್ದಾರೆ. ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಉತ್ತಮವಾದ ಮಳೆಯಾಗುತ್ತಿದ್ದು, ರೈತರು ಬಿತ್ತನೆ ಬೀಜ ಮತ್ತು ವಿವಿಧ ರಸಗೊಬ್ಬರಗಳನ್ನು ಕೊಂಡು ಬಿತ್ತನೆ ಕಾರ್ಯದಲ್ಲಿ ತೊಡಗಿಕೊಳ್ಳುತ್ತೀದ್ದಾರೆ. ಆದರೆ ಜಿಲ್ಲೆಯಲ್ಲಿ ಅಲ್ಲಲ್ಲಿ ರಸಗಗೊಬ್ಬರಗಳನ್ನು ರಸಗೊಬ್ಬರಗಳ ಚೀಲದ ಮೇಲೆ ಮುದ್ರಿತವಾದ ಗರಿಷ್ಠ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗುತ್ತಿದೆ ಎಂದು ರೈತರಿಂದ ಹಾಗೂ ವಿವಿಧ ರೈತ ಸಂಘಟನೆಗಳ ಮುಖಂಡರಿಂದ ದೂರುಗಳು ಸ್ವೀಕೃತವಾಗುತ್ತಿವೆ. ಆದುದರಿಂದ ಜಿಲ್ಲೆಯಲ್ಲಿ ಅಧಿಕೃತ ಪರವಾನಿಗೆ ಪಡೆದಿರುವ ರಸಗೊಬ್ಬರ ಮಾರಾಟಗಾರರು ಯಾವುದೇ ಸಂದರ್ಭದಲ್ಲಿ ರಸಗೊಬ್ಬರಗಳ ಚೀಲದ ಮೇಲೆ ಮುದ್ರಿತವಾದ ಗರಿಷ್ಠ ಬೆಲೆಗಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರಗಳನ್ನು ಮಾರಾಟ ಮಾಡಬಾರದು. ಕಡ್ಡಾಯವಾಗಿ ರಸಗೊಬ್ಬರಗಳ ದರ ಪಟ್ಟಿ ಮತ್ತು ದೈನಂದಿನ ದಾಸ್ತಾನನ್ನು ತಮ್ಮ ಮಾರಾಟ ಮಳಿಗೆಗಳ ಮುಂದೆ ಸಾರ್ವಜನಿಕವಾಗಿ ಕಾಣುವಂತೆ ನಾಮಫಲಕ ಪ್ರದರ್ಶಿಸಬೇಕು. ತಪ್ಪಿದಲ್ಲಿ ರಸಗೊಬ್ಬರ (ನಿರವಯವ, ಸಾವಯವ ಅಥವಾ ಮಿಶ್ರಿತ) (ನಿಯಂತ್ರಣ) ಆದೇಶ, 1985ರ ನಿಯಮಾವಳಿಗಳ ಅನ್ವಯ ಕಾನೂನು ಕ್ರಮ ಜರುಗಿಸಲಾಗುವುದು. ಕೃತಕ ರಸಗೊಬ್ಬರ ಅಭಾವ ಸೃಷ್ಟಿಸಿದ್ದು ಕಂಡುಬಂದಲ್ಲಿ ರಸಗೊಬ್ಬರ ಮಾರಾಟ ಪರವಾನಗಿಯನ್ನು ಅಮಾನತ್ತು/ರದ್ದುಪಡಿಸಲು ಕ್ರಮವಹಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ತಿಳಿಸಿದ್ದಾರೆ.


### ಬ್ಯಾಂಕ್ ಆಫ್ ಬರೋಡದಲ್ಲಿ ಮಾಜಿ ಸೈನಿಕರಿಗೆ ಉದ್ಯೋಗಾವಕಾಶ

» **ಚಿತ್ರದುರ್ಗ**

ಬ್ಯಾಂಕ್ ಆಫ್ ಬರೋಡ ದಲ್ಲಿ ಮಾಜಿ ಸೈನಿಕರಿಗಾಗಿ ಅಫೀಸ್ ಅಸಿಸ್ಟಂಟ್ (ಕಜಂಟಿ) ಹುದ್ದೆಗಳಿಗೆ ಆಸಕ್ತ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಿದ್ದು, ಮೇ.23 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಜಿಯನ್ನು ವೆಬ್‌ಸೈಟ್ www.bankofbaroda.co.in -> Career Page -> Current Opportunities -> Recruitment of Office Assistant (peon) ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಬ್ಯಾಂಕ್‌ನ ಜಾಹಿರಾತು–BOB/HRM/REC/ADVT/2025/05 ನೋಡಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಮೇ.21ರಂದು ಡಾ.ಬಂಜಗೆರೆ ಜಯಪ್ರಕಾಶ್ ವಿಶೇಷ ಸಂದರ್ಶನ ಪ್ರಸಾರ

» **ಚಿತ್ರದುರ್ಗ**



"ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ಪ್ರಸಾರ ಭಾರತಿ ಆಕಾಶವಾಣಿಯ ಕನ್ನಡ ಅಭಿಯಾನದ ಅಂಗವಾಗಿ ನಾಡು–ನುಡಿ ಸಂಸ್ಕೃತಿಯ ಕುರಿತಾದ ವಿಶೇಷ ಸಂದರ್ಶನ ಸರಣಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರು ಹಾಗೂ ಪ್ರಸ್ತುತ ಹಂಪಿ ಕನ್ನಡ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಡಾ.ಬಂಜಗೆರೆ ಜಯಪ್ರಕಾಶ್ ಅವರೊಂದಿಗೆ ಆಕಾಶವಾಣಿಯ ಡಾ.ನವೀನ್ ಮಸ್ಕಲ್ ನಡೆಸಿದ ವಿಶೇಷ ಸಂದರ್ಶನ ಭಾಗ–1 ಇದೇ ಮೇ.21ರಂದು ಬೆಳಿಗ್ಗೆ 8.30ಕ್ಕೆ ಪ್ರಸಾರವಾಗಲಿದೆ ಎಂದು ಪ್ರಸಾರ ಭಾರತಿ ಚಿತ್ರದುರ್ಗ ಆಕಾಶವಾಣಿ ಪ್ರಕಟಣೆ ತಿಳಿಸಿದೆ.

### ಚಿತ್ರದುರ್ಗ ಜಿಟಿಟಿಸಿ ಪ್ರವೇಶಾತಿಗೆ ಅರ್ಜಿ ಆಹ್ವಾನ, ಶೇ.100ರಷ್ಟು ಉದ್ಯೋಗ ಖಾತರಿ

# ಉದ್ಯೋಗದ ಭವಿಷ್ಯಕ್ಕಾಗಿ ಜಿಟಿಟಿಸಿ ಕೋರ್ಸ್

» **ಚಿತ್ರದುರ್ಗ**


ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ನಿರುದ್ಯೋಗ ದೊಡ್ಡ ಸಮಸ್ಯೆಯಾಗಿದ್ದು, ಯುವ ಜನತೆ ಕೌಶಲಾಧಾರಿತ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಳ್ಳುವ ಮೂಲಕ ನಿರುದ್ಯೋಗ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಎಸ್‌ಎಸ್‌ಎಲ್‌ಸಿ ನಂತರ ವೃತ್ತಿ ಶಿಕ್ಷಣದತ್ತ ಹೊರಳುವ ವಿದ್ಯಾರ್ಥಿಗಳಿಗೆ ಕೌಶಲ್ಯಾಧಾರಿತ ತರಬೇತಿ ನೀಡುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ಉದ್ಯೋಗ ಭರವಸೆಯ ಕೋರ್ಸ್‌ಗಳನ್ನು ನೀಡುವಲ್ಲಿ ಮುಂಚೂಣೆಯಲ್ಲಿದೆ.

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ 2025–26ನೇ ಸಾಲಿಗೆ ಡಿಪ್ಲೋಮಾ ಪ್ರವೇಶಾತಿಯು ಪ್ರಾರಂಭವಾಗಿದ್ದು, 1. ಡಿಪ್ಲೋಮಾ ಇನ್‌ಟೂಲ್ ಅಂಡ್ ಡೈ ಮೇಕಿಂಗ್ 2. ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ 3. ಡಿಪ್ಲೋಮಾ ಇನ್ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಎಂಬ ಮೂರು ಕೋರ್ಸ್‌ಗಳಿವೆ. ಈ ಕೋರ್ಸ್‌ಗಳ ಅವಧಿ 3 ವರ್ಷ ಹಾಗೂ 1 ವರ್ಷ ಕಡ್ಡಾಯವಾಗಿ ಕೈಗಾರಿಕೆಗಳಿಗೆನಿಯೋಜಿಸಲಾಗುವುದು.

ಡಿಪ್ಲೋಮಾ ಆದ ನಂತರ ದೇಶ ವಿದೇಶಗಳಲ್ಲಿ ಹೆಚ್ಚಿನ ಬೇಡಿಕೆಗಳಿರುತ್ತವೆ. ಹಾಗೂ ಚಿತ್ರದುರ್ಗ ಜಿಟಿಟಿಸಿ ಕೇಂದ್ರದಲ್ಲಿ ಡಿಪ್ಲೋಮಾ ಕೋರ್ಸ್‌ಗಳಿಗೆ ಶೇ.70 ಪ್ರಾಯೋಗಿಕ ತರಬೇತಿ ಹಾಗೂ ಶೇ.30 ಥೇರಿ ಅನುಗುಣವಾಗಿ 20ಕ್ಕೂ ಹೆಚ್ಚು ಸುಸಜ್ಜಿತವಾಗಿರುವ ಪ್ರಯೋಗಾಲಗಳಿದ್ದು, ಉತ್ತಮವಾದ ತರಬೇತಿ ನೀಡಲಾಗುತ್ತದೆ.

ವಿಶೇಷವಾಗಿ ದ್ವಿತಿಯ ಪಿಯುಸಿ (ವಿಜ್ಞಾನ) ಹಾಗೂ ಐಟಿಐ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ನೇರವಾಗಿ ದ್ವಿತಿಯ ವರ್ಷಕ್ಕೆಜಿಟಿಟಿಸಿಡಿಪ್ಲೋಮಾಗೆದಾಖಲಾತಿ






ಪಡೆಯಬಹುದು. ಅಲ್ಲದೇ ಡಿಪ್ಲೋಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ನೇರವಾಗಿ ದ್ವಿತಿಯ ವರ್ಷದ ಇಂಜಿನಿಯರಿಂಗ್‌ಗೆ ಪ್ರವೇಶ ಪಡೆಯಬಹುದು. ಈಗಾಗಲೇ ಆನ್‌ಲೈನ್ ಪ್ರವೇಶ ಅರ್ಜಿಗಳು ಆರಂಭವಾಗಿದ್ದು "ಮೊದಲು ಬಂದವರಿಗೆ ಮೊದಲ ಆದ್ಯತೆ" ಮೇರೆಗೆ ಪ್ರವೇಶಾತಿ ಮಾಡಿಕೊಳ್ಳಲಾಗುತ್ತಿದೆ.

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು (ಜಿಟಿಟಿಸಿ) ಕರ್ನಾಟಕ ರಾಜ್ಯ ಸರ್ಕಾರ ಮತ್ತು ಡೆನ್ಮಾರ್ಕ್ ಸರ್ಕಾರದ ನಡುವಿನ ಒಂದು ಒಪ್ಪಂದಕ್ಕನುಗುಣವಾಗಿ 1972 ರಲ್ಲಿ ಬೆಂಗಳೂರಿನಲ್ಲಿ ಪ್ರಾರಂಭಿಸಲಾಯಿತು. ಈ ಕೇಂದ್ರದ ಮುಖ್ಯ ಉದ್ದೇಶವೇನೆಂದರೆ ನುರಿತ ಮಾನವ ಸಂಪನ್ಮೂಲವನ್ನು ಕೈಗಾರಿಕ ಕ್ಷೇತ್ರಕ್ಕೆ ಒದಗಿಸುವುದು ಹಾಗೂ ಕೈಗಾರಿಕ ಸಂಸ್ಥೆಗಳ ತಂತ್ರಜ್ಞಾನ ಮತ್ತು ತರಬೇತಿಗಳ ನೆರವು ನೀಡುವುದು.

ಕೈಗಾರಿಕ ಕ್ಷೇತ್ರದಲ್ಲಿ ಯುವಕರನ್ನು ಪ್ರೋತ್ಸಾಹಿಸಲು ಯಂತ್ರಗಳ ಬಗ್ಗೆ ಇನ್ನಷ್ಟು ಅರಿವು ಮೂಡಿಸುವ ಸಲುವಾಗಿ 2021ರಲ್ಲಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವನ್ನು ಚಿತ್ರದುರ್ಗದಲ್ಲಿ ಸ್ಥಾಪಿಸಲಾಯಿತು. ಇಲ್ಲಿಯವರೆಗೆ ಹಲವಾರು ಬಡ ಹಿಂದುಳಿದ ರೈತರ ಮಕ್ಕಳು ತಾಂತ್ರಿಕ ತರಬೇತಿಯನ್ನು ಪಡೆದು ದೇಶ–ವಿದೇಶದ ದೊಡ್ಡದೊಡ್ಡ ಕಂಪನಿಗಳಲ್ಲಿ ದೊಡ್ಡ ಹುದ್ದೆಗಳನ್ನು ಅಲಂಕರಿಸುತ್ತಾರೆ.

**ಏಕಕಾಲದಲ್ಲಿ ಉದ್ಯೋಗ ಕೇಂದ್ರಿತ, ಸ್ವಯಂ ಉದ್ಯೋಗಿಗಳಾಗಲು ತರಬೇತಿ:** ಜಿಟಿಟಿಸಿ ಚಿತ್ರದುರ್ಗಕೇಂದ್ರದಲ್ಲಿ ಉತ್ತಮವಾದ ಕ್ಯಾಂಪಸ್ ವ್ಯವಸ್ಥೆ, ವಿಶಾಲವಾದ ಕಟ್ಟಡಗಳು, ಅತ್ಯುತ್ತಮ ಪ್ರಾಯೋಗಿಕ ಕಲಿಕೆಗೆ ಪೂರಕವಾದ ವರ್ಕ್‌ಶಾಪ್, ಲ್ಯಾಬೋರೇಟರಿ ಸೌಲಭ್ಯಗಳಿಂದ ಉದ್ಯೋಗಾಧಾರಿತ ಪ್ರಾಯೋಗಿಕತಾಂತ್ರಿಕ ಶಿಕ್ಷಣ ಕಲಿಕೆಗೆ ಗಡಿಭಾಗದ ಹಾಗೂ ಸುತ್ತಲಿನ ವಿದ್ಯಾರ್ಥಿಗಳಿಗೆ ವರದಾನವಾಗಿದೆ. ಜಿಟಿಟಿಸಿ ಮುಖ್ಯ ಪರಿಕಲ್ಪನೆ ಯಂತ್ರೋಪಕರಣಗಳ ಚಾಲನೆ, ನಿರ್ವಹಣೆ ಉದ್ಯೋಗಾದಾರಿತ ತಾಂತ್ರಿಕ ತರಬೇತಿ ನೀಡುವುದೇ ಆಗಿರುವುದರಿಂದ ಇದು ಏಕ ಕಾಲದಲ್ಲಿ ಉದ್ಯೋಗ ಕೇಂದ್ರಿತವು ಸ್ವಯಂ ಉದ್ಯಮಿಗಳಾಗಲೂ ತರಬೇತಿ ನೀಡುವ ಶಿಕ್ಷಣವೂ ಆಗಿದೆ.

ಈ ಮೇಲ್ಕಾಣಿಸಿದ ಡಿಪ್ಲೋಮಾ ಕೋರ್ಸ್‌ಗಳ ವಿಶೇಷತೆಗಳೆಂದರೆ ಡಿಪ್ಲೋಮಾ ಇನ್‌ಟೂಲ್ ಅಂಡ್‌ಡೈ ಮೇಕಿಂಗ್ ಒಂದು ಕಾರಿನ ಬಾಡಿ ಪಾರ್ಟ್ಸ್ ತಯಾರಿಸಲಿಕ್ಕೆ ಏನೇನು ಬೇಕೋ ಅಂತ ಮೌಲ್ಡ್ ಡಿಸೈನ್ ಮತ್ತಿತರೆ ಸಂಗತಿಗಳನ್ನು ಕಲಿಯುತ್ತಾರೆ.

ಡಿಪ್ಲೋಮಾ ಇನ್ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಹಾಗೂ ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ ಈ 2 ಕೋರ್ಸ್‌ಗಳಲ್ಲಿ ಆಟೋಮೇಶನ್ ಹಾಗೂ ರೋಬೋಟಿಕ್ ಮಾಡೋದು ಹೇಗೆ? ಅವುಗಳಿಗೆ ಕೋಡಿಂಗ್ ಮಾಡುವುದು ಹೇಗೆ? ಅನ್ನೋದನ್ನು ಕಲಿಯುತ್ತಾರೆ. ಪಠ್ಯದಲ್ಲಿ ಓದಿದ್ದನ್ನು ಪ್ರಾಯೋಗಿಕವಾಗಿ ಕಲಿತಾಗ ಮಾತ್ರ ಕೌಶಲ್ಯ ಕಲಿಕೆಯಲ್ಲಿ ನಿಖರತೆ ಬರುತ್ತದೆ.

ಕಡಿಮೆ ವೆಚ್ಚದಲ್ಲಿ ಜಿಟಿಟಿಸಿ ಶಿಕ್ಷಣ: ಇನ್ನಿತರ ಖಾಸಗಿ ಕಾಲೇಜಿಗಳಿಗೆ ಹೋಲಿಸಿದಾಗ ಜಿಟಿಟಿಸಿ ಶಿಕ್ಷಣವನ್ನು ಕಡಿಮೆ ವೆಚ್ಚದಲ್ಲಿ ಮಾಡಬಹುದು. ಜಿಟಿಟಿಸಿಯಲ್ಲಿ ವಿದ್ಯಾರ್ಥಿಗೆ ವಾರ್ಷಿಕ ಕೇವಲ 34 ಸಾವಿರದಷ್ಟು ಖರ್ಚು ಬರುತ್ತದೆ. ಕರ್ನಾಟಕ ಸರ್ಕಾರ ಪ್ರತಿ ವಿದ್ಯಾರ್ಥಿಗೂ 26 ಸಾವಿರದಿಂದ 28 ಸಾವಿರದ ತನಕ ವಿದ್ಯಾರ್ಥಿಗೆ ವೇತನ ರೂಪದಲ್ಲಿ ವಾಪಸ್ ಕೊಡುತ್ತದೆ ಬೇರೆ ಬೇರೆ ಯೋಜನೆಗಳಡಿ ಈ ಸಹಾಯ ಸಿಗಲಿದೆ ಯೂನಿಫಾರಂ, ಕ್ಯಾಲುಕೇಲಟರ್, ಸೇಫ್ಟಿ ಶೂ ನಂತರ ಸಣ್ಣ ಪುಟ್ಟ ಖರ್ಚುಗಳು ಮಾತ್ರ ಬರುತ್ತವೆ. ಡಿವೈಡಿಂಗ್ ಸಿಸ್ಟಂ ಹಾಸ್ಟೆಲ್ ಸೌಲಭ್ಯವಿದೆ. ಎಸ್ಸಿ, ಎಸ್ಟಿ, ಒಬಿಸಿ ವಿದ್ಯಾರ್ಥಿಗಳು ಆಯಾ ಇಲಾಖೆ ವಿದ್ಯಾರ್ಥಿ ನಿಲಯಗಳಿಗೆ ಸೇರಬಹುದು. ಇಲಾಖೆ ಹಾಸ್ಟೆಲ್‌ಗಳು ದೂರವಾಗುತ್ತವೆ.

ಓಡಾಟ ಕೂಡದು ಬಾರಿ ಎನ್ನುವ ಕಾರಣಕ್ಕೆ ಜಿಟಿಟಿಸಿ ಹಾಸ್ಟೆಲ್‌ಗೆ ಬಹುತೇಕರು ಸೇರುತ್ತಾರೆ. ಇಲ್ಲಿ ವಿದ್ಯಾರ್ಥಿಗಳೇ ಹಾಸ್ಟೆಲ್ ಆಗು ಹೋಗುಗಳನ್ನು ನಿರ್ವಹಿಸುತ್ತಾರೆ. ಬಡ ಹಾಗೂ ಮಧ್ಯಮವರ್ಗದ ವಿದ್ಯಾರ್ಥಿಗಳು ಈ ಜಿಟಿಟಿಸಿಗಳ ಮೂಲಕ ತಾಂತ್ರಿಕ ಶಿಕ್ಷಣ ಪಡೆಯುವುದು ಅತ್ಯಂತ ಸುಲಭದ ಮಾರ್ಗವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಕುಂಚಿಗನಾಳ್ ಕಣಿವೆ ಮಾರಮ್ಮ ದೇವಸ್ಥಾನ ಹಿಂಭಾಗದ ಹಳೆಯ ಬೆಂಗಳೂರು ರಸ್ತೆಯ ಸರ್ವೆ ನಂ.44ರ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ದೂರವಾಣಿ ಸಂಖ್ಯೆ 9738465834, 9481866855, 9945616114ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಟಿಟಿಸಿ ಪ್ರಾಂಶುಪಾಲರಾದ ಬಿ.ಎಸ್.ಸುಹಾಸ್ ತಿಳಿಸಿದ್ದಾರೆ.

## ಆಯುಷ್ ಇಲಾಖೆಯ ಚ್ಯವನ್ ಪ್ರಾಶ್ ಆರೋಗ್ಯಕರ: ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ

» **ಚಿತ್ರದುರ್ಗ**

ಚ್ಯವನ ಪ್ರಾಶವು ನಮ್ಮ ದೇಹದ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿ, ಯಾವುದೇ ರೋಗ ವಾಸಿಯಾಗಲು ಸಹಕರಿಸುತ್ತದೆ. ಆಯುಷ್ ಇಲಾಖೆಯ ಚ್ಯವನ್ ಪ್ರಾಶ್ ಆರೋಗ್ಯಕರ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಹೇಳಿದರು.

ಇಲ್ಲಿನ ಬುದ್ಧನಗರದ ನಗರ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಆಶಾ ಮಾಸಿಕ ಸಭೆಯಲ್ಲಿ ಕ್ಷಯರೋಗ ನಿಯಂತ್ರಿಸಲು ಚಿಕಿತ್ಸೆ ಪಡೆಯುತ್ತಿರುವ ಫಲಾನುಭವಿಗಳಿಗೆ ಆಯುಷ್ ಪುಷ್ಠಿಕರ ಔಷಧಿ ಚ್ಯವನ್ ಪ್ರಾಶ್ ವಿತರಿಸಿ ಅವರು ಮಾತನಾಡಿದರು.

ಕ್ಷಯರೋಗಿಗಳಿಗೆ ಚ್ಯವನ ಪ್ರಾಶ್ ಉತ್ತಮ ಪೂರಕ ಔಷಧಿ. ಆರೋಗ್ಯ ಇಲಾಖೆ ವತಿಯಿಂದ ನೀಡುವ ಮಾತ್ರೆಗಳ ಜೊತೆಗೆ ಈ ಔಷಧಿಯನ್ನು ಸೇವಿಸುವುದರಿಂದ ಶೀಘ್ರ ಗುಣಮುಖ ಹೊಂದಬಹುದು ಎಂದು ತಿಳಿಸಿದರು. ಆಯುಷ್ ವೈದ್ಯರಾದ ಡಾ. ಶಿವಕುಮಾರ್ ಮಾತನಾಡಿ, ಎಲ್ಲಾ ವೈದ್ಯ ಪದ್ಧತಿಗಳು ಕೈಜೋಡಿಸಿ ಸಂಯುಕ್ತವಾಗಿ




ಪ್ರಯತ್ನಿಸಿದಾಗ ಸಮುದಾಯದಲ್ಲಿ ಉತ್ತಮ ಆರೋಗ್ಯ ನೀಡಲು ಸಾಧ್ಯ. ಚ್ಯವನ ಪ್ರಾಶವು ಕ್ಷಯ ರೋಗಿಗಳಲ್ಲಿ ಶಕ್ತಿಯನ್ನು ನೀಡುತ್ತದೆ ಹಾಗೂ ಪೂರಕ ಪೋಷಕಾಂಶಗಳನ್ನು ಒದಗಿಸಿ ಶೀಘ್ರ ಗುಣಮುಖರಾಗಲು ಸಹಕರಿಸುತ್ತದೆ ಎಂದು ತಿಳಿಸಿದರು. ಆಯುಷ್ ಇಲಾಖೆಯಿಂದ ವಿತರಿಸುವ ಚ್ಯವನ್ ಪ್ರಾಶ್ ಉತ್ತಮ ಪೌಷ್ಠಿಕಾಂಶಗಳಿಂದ ಕೂಡಿದ್ದು, ಯಾವುದೇ ವಯಸ್ಸಿನವರು ಸೇವಿಸಬಹುದಾಗಿದೆ. ಇದನ್ನು ಒಂದು ಲೋಟ ಹಾಲಿನೊಂದಿಗೆ ಬೆರೆಸಿ ತಿನ್ನಬಹುದು ಅಥವಾ ನೀರಿನೊಂದಿಗೆ ಆದರೂ ಬೆರೆಸಿ ತಿನ್ನಬಹುದು. ಇದನ್ನು ಕ್ಷಯರೋಗಿಗಳಿಗೆ ನೀಡುವುದರಿಂದ ಅವರು ಬೇಗ ಗುಣಮುಖರಾಗಬಹುದಾಗಿದೆ. ಎಲ್ಲರೂ ಕೈ ಜೋಡಿಸಿ ಟಿ.ಬಿ.ಯನ್ನು ಕೊನೆಗಾಣಿಸೋಣ ಎಂದು ತಿಳಿಸಿದರು ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಟಿ.ಶ್ರೀನಿವಾಸ ಮೂರ್ತಿ, ಕ್ಷಯರೋಗ ನಿಯಂತ್ರಣ ಕಚೇರಿಯ ನಂದನ್, ಎಸ್‌ಟಿಎಸ್ ನಾಗರಾಜ್, ಟಿಬಿಹೆಚ್‌ವಿ ಸಂತೋಷ್, ಲೋಕೇಶ್, ಫಾರ್ಮಸಿ ಅಧಿಕಾರಿ ಭೂತರಾಜ್, ಆರೋಗ್ಯ ನಿರೀಕ್ಷಣಾಧಿಕಾರಿ ಕೋಟೇಶ್ ಚಕ್ರವರ್ತಿ, ಅರೋಗ್ಯ ಇಲಾಖೆಯ ಕೇಶವ, ರೇಖಾ, ಆಶಾ ಕಾರ್ಯಕರ್ತೆಯರು ಮತ್ತು ಸಿಬ್ಬಂದಿ ವರ್ಗ ಇದ್ದರು.

## ಮಳೆ ವರದಿ: ಚಿತ್ರದುರ್ಗ ಜಿಲ್ಲೆಯಲ್ಲಿ 3.4 ಮಿ.ಮೀ ಮಳೆ

» **ಚಿತ್ರದುರ್ಗ**

ಸೋಮವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 3.4 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 0.1 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 1.1 ಹಿರಿಯೂರು ತಾಲ್ಲೂಕು 2.8 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 2.5 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 6.3 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 0.9 ಮಿ.ಮೀ ಮಳೆಯಾಗಿದೆ.

ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 0.1 ಮಿ.ಮೀ, ಪರಶುರಾಂಪುರ 0.2 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 0.7 ಮಿ.ಮೀ, ಭರಮಸಾಗರ 2.5 ಮಿ.ಮೀ, ಹಿರೇಗುಂಟನೂರು 1.6 ಮಿ.ಮೀ, ತುರುವನೂರು 0.1 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 0.8 ಮಿ.ಮೀ, ಧರ್ಮಪುರ 0.1 ಮಿ.ಮೀ, ಜವನಗೊಂಡನಹಳ್ಳಿ 10 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 4.3 ಮಿ.ಮೀ, ಬಿ.ದುರ್ಗ 0.4 ಮಿ.ಮೀ, ರಾಮಗಿರಿ 1.7 ಮಿ.ಮೀ, ತಾಳ್ಯ 3.3 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 3.8 ಮಿ.ಮೀ, ಮಾಡದಕೆರೆ 4.5 ಮಿ.ಮೀ, ಮತ್ತೋಡು 10.3ಮಿ.ಮೀ, ಶ್ರೀರಾಂಪುರ 8.5 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ದೇವಸಮುದ್ರದಲ್ಲಿ 1.9 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

**ಪ್ರಮುಖ ಸುದ್ದಿ**

# ಕೆಂಚಾಪುರದಲ್ಲಿ ನೂತನ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ

» **ಹೊಳಲ್ಕೆರೆ**

ಡಿಸೆಂಬರ್‌ನೊಳಗೆ ತಾಲ್ಲೂಕಿನಾದ್ಯಂತ ಎಲ್ಲಾ ಕೆರೆಗಳಿಗೆ ನೀರು ತುಂಬಿಸಿ ಕುಡಿಯುವ ನೀರು, ಸಿ.ಸಿ.ರಸ್ತೆ, ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣ ಮಾಡುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ಕೆಂಚಾಪುರ ಗ್ರಾಮದಲ್ಲಿ ನೂತನ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಮಂಗಳವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಬಡವರು, ರೈತರು, ಸಾರ್ವಜನಿಕರು ಮೆಚ್ಚುವ ರೀತಿಯಲ್ಲಿ ಕೆಲಸ ಮಾಡುವುದು



ರಾಜಕಾರಣಿ ಕರ್ತವ್ಯ. ಇನ್ನೊಂದು ವರ್ಷದಲ್ಲಿ ವಿದ್ಯುತ್ ಪವರ್ ಸ್ಟೇಷನ್ ನಿರ್ಮಿಸುತ್ತೇನೆ. ಜಿಲ್ಲೆಯಲ್ಲಿಯೇ ಇಲ್ಲದಂತ ದೊಡ್ಡ ವಿದ್ಯುತ್ ಪವರ್ ಸ್ಟೇಷನ್ ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ಐದುನೂರು ಕೋಟಿ ರೂ.ವೆಚ್ಚದಲ್ಲಿ ಕಟ್ಟಲಾಗುವುದು. ಜೋಗ್‌ಫಾಲ್ಸ್‌ನಿಂದ ನೇರವಾಗಿ ಇಲ್ಲಿಗೆ ಪೂರೈಕೆಯಾಗಲಿರುವ ವಿದ್ಯುತ್‌ನ್ನು ತಾಲ್ಲೂಕಿನಾದ್ಯಂತ ಎಲ್ಲಾ ಕಡೆ ಸರಬರಾಜು ಮಾಡಲಾಗುವುದು. ಇದರಿಂದ ಇನ್ನು ಐವತ್ತು ವರ್ಷಗಳ ಕಾಲ ರೈತರಿಗೆ ವಿದ್ಯುತ್ ಸಮಸ್ಯೆಯಿರುವುದಿಲ್ಲ ಎಂದರು. ಹಿರಿಯೂರಿನ ವಾಣಿವಿಲಾಸಸಾಗರದ ಮಧ್ಯೆ ನೀರಿನಲ್ಲಿ ಪಿಲ್ಲರ್ ಎತ್ತಿ ಸ್ಟೇಜ್ ಕಟ್ಟಿ ಮೋಟಾರ್ ಕೂರಿಸಿ ನೀರು ತಂದು ಪ್ರತಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಕೊಡುವುದಕ್ಕಾಗಿ 367 ಕೋಟಿ ರೂ.ಗಳನ್ನು ಖರ್ಚು ಮಾಡಲಾಗುತ್ತಿದೆ. ಕ್ಷೇತ್ರಾದ್ಯಂತ ಎಲ್ಲಿಯೂ ಇಂತಹ ಕೆಲಸ ಆಗಿಲ್ಲವೆಂದು ಯಾರು ಹೇಳುವಂತಿಲ್ಲ. ಎಲ್ಲೆಲ್ಲಿ ಏನೇನು ಅಭಿವೃದ್ದಿ ಕೆಲಸಗಳಾಗಬೇಕೆಂಬುದನ್ನು ಹುಡುಕಿ ಹುಡುಕಿ ಹಗಲು–ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ. ರಾಜ್ಯದಲ್ಲಿ ಸರ್ಕಾರ ಯಾವುದಿದೆ ಎನ್ನುವುದು ಮುಖ್ಯವಲ್ಲ. ಹಣ ತರುವಯೋಗ್ಯತೆಯಿಟ್ಟುಕೊಂಡಿದ್ದೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರುಗಳಾದ ಕೆ.ಸಿ.ಮಹೇಶ್ವರಪ್ಪ, ಕುಮಾರಣ್ಣ, ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಮಲ್ಲಿಕಾರ್ಜುನ್, ಧನಂಜಯ, ಆನಂದ್, ಸುಭಾಷ್‌ಮೂರ್ತಿನಾಯ್ಕ, ಕುಮಾರ್ ಹಾಗೂ ಗ್ರಾಮದ ಮುಖಂಡರುಗಳು ಹಾಜರಿದ್ದರು.

## ಫಾಸ್ಟ್ ನ್ಯೂಸ್

### 21ಕ್ಕೆ ನ್ಯಾಯಾಧೀಶರಿಗೆ ಬೀಳ್ಕೊಡುಗೆ ಸಮಾರಂಭ

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ಮೇ 21ರ ಬುಧವಾರ ಮಧ್ಯಾಹ್ನ 12ಕ್ಕೆ ನಗರದ ಶ್ರೀಡಿ.ದೇವರಾಜ ಅರಸು ಬಡಾವಣೆಯಲ್ಲಿನ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿರುವ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ದಾವಣಗೆರೆ ಜಿಲ್ಲೆಯಿಂದ ವರ್ಗಾವಣೆಗೊಂಡ ನ್ಯಾಯಾಧೀಶರುಗಳಿಗೆ ಬೀಳ್ಕೊಡುಗೆ ಸಮಾರಂಭ ಆಯೋಜಿಸಲಾಗಿದೆ.ಅಧ್ಯಕ್ಷತೆಯನ್ನುಜಿಲ್ಲಾವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ. ವೇಲಾ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ, 2ನೇ ಹ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ನ್ಯಾಯಾಧೀಶರಾದ ವಿ.ಎಲ್.ಅಮರ್ ಆಗಮಿಸಲಿದ್ದಾರೆ. ಇದೇ ವೇಳೆ ವರ್ಗಾವಣೆಗೊಂಡ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಮುಖ್ಯ ನ್ಯಾಯಿಕ ದಂಡಾಧಿಕಾರಿಗಳಾದ ಟಿ.ಎಂ.ನಿವೇದಿತಾ, 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧಿಶರಾದ ಜೆ.ಸಿ.ಪ್ರಶಾಂತ್, 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಮಲ್ಲಿಕಾರ್ಜುನ್, 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಎನ್.ಕೆ.ಸಿದ್ದರಾಜು, 4ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ನಾಜಿಯಾ ಕೌಸರ್ ಇವರಿಗೆ ಬೀಳ್ಕೊಡುಗೆ ಸಮಾರಂಭ ಆಯೋಜಿಸಲಾಗಿದೆ ದಾವಣಗೆರೆ ಜಿಲ್ಲಾ ವಕೀಲರ ಸಂಘದ ಪ್ರಕಟಣೆ ತಿಳಿಸಿದೆ.

### ಐಎಫ್‌ಡಬ್ಲ್ಯೂಜೆಯ ಸದಸ್ಯರಾಗಿ ಒಡೆಯರ್ ಮರು ನೇಮಕ



» ದಾವಣಗೆರೆ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ದಾವಣಗೆರೆ ಜಿಲ್ಲಾ ಸಮಿತಿ ಮತ್ತು ರಾಜ್ಯಸಮಿತಿಯ ಶಿಫಾರಸ್ಸಿನಂತೆ ಎಸ್ ಕೆ ಒಡೆಯರ್ ಇವರನ್ನು ದಾವಣಗೆರೆ ಜಿಲ್ಲೆಯಿಂದ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟ(ಐ ಎಫ್ ಡಬ್ಲ್ಯೂ ಜೆ)ನವದೇಹಲಿಯ ರಾಷ್ಟ್ರೀಯ ಮಂಡಳಿಯ ಸದಸ್ಯರನ್ನಾಗಿ ಒಮ್ಮತದಿಂದ ಆಯ್ಕೆಮಾಡಲಾಗಿತ್ತು.ಅದರಂತೆ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಬಿ ವಿ ಮಲ್ಲಿಕಾರ್ಜುನಯ್ಯ ರವರು ಎಸ್ ಕೆ ಒಡೆಯರ್ ಅವರನ್ನು ರಾಷ್ಟ್ರೀಯ ಮಂಡಳಿಯ ಸದಸ್ಯರನ್ನಾಗಿ ನೇಮಕ ಮಾಡಿ ಆದೇಶಿಸಿದ್ದರು.ಪ್ರಸ್ತುತ ಅಧಿಕಾರದ ಅವಧಿಯು 2025 ಮಾರ್ಚ್ 31,ಕ್ಕೆ ಮುಕ್ತಾಯವಾಗಬೇಕಿತ್ತು ಆದರೆ ಎಸ್ ಕೆ ಒಡೆಯರ್ ರವರನ್ನು ಇನ್ನೊಂದು ಅವದಿಗೆ ಮುಂದುವರಿಸಲು ರಾಷ್ಟ್ರೀಯ ಅಧ್ಯಕ್ಷರು ತೀರ್ಮಾನಿಸಿದ್ದರಿಂದ ಶ್ರೀ ಎಸ್ ಕೆ ಒಡೆಯರ್ ರವರನ್ನು ಮತ್ತೊಂದು ಅವಧಿಗೆ ರಾಷ್ಟ್ರೀಯ ಮಂಡಳಿಯ ಸದಸ್ಯರನ್ನಾಗಿ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಬಿ ವಿ ಮಲ್ಲಿಕಾರ್ಜುನಯ್ಯ ರವರು ಮರು ನೇಮಕಮಾಡಿ ಆದೇಶ ನೀಡಿದ್ದಾರೆ. ಈ ಅವಧಿಯು 2027ಮಾರ್ಚ್ 31,ರ ವರೆಗೆ ಮುಂದು ವರಿಯಲಿದೆ ಎಂದು ತಿಳಿಸಿದ್ದಾರೆ.

### ಮೇ.21ರಂದು "ಸುಗಮ್ಯ ಯಾತ್ರಾ" ಅರಿವು ಮೂಡಿಸುವ ಜಾಥಾ

» ಚಿತ್ರದುರ್ಗ

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯದ "ಸುಗಮ್ಯ ಯಾತ್ರಾ" ಅರಿವು ಮೂಡಿಸುವ ಕಾರ್ಯಕ್ರಮದಡಿ ಎಲ್ಲಾ ಸರ್ಕಾರಿ ಕಚೇರಿಗಳು, ಸಾರ್ವಜನಿಕ ಕಟ್ಟಡಗಳು, ಮನೋರಂಜನೆ ಸ್ಥಳಗಳು, ಉದ್ಯಾನಗಳು, ಶಾಲಾ-ಕಾಲೇಜುಗಳು, ಅಂಗನವಾಡಿ ಕಟ್ಟಡಗಳು, ಸರ್ಕಾರಿ ಆಸ್ಪತ್ರೆಗಳು, ಗ್ರಂಥಾಲಯಗಳು, ಪ್ರವಾಸಿ ತಾಣಗಳು ಮತ್ತು ಸಾರ್ವಜನಿಕ ಸ್ಥಳಗಳು ಅಡೆ-ತಡೆ ರಹಿತ ವಾತಾವರಣ ಒಳಗೊಂಡಿರುವ ಬಗ್ಗೆ ಮಾಹಿತಿ ಕಲೆಹಾಕಲು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಅಂಗವಾಗಿ ಇದೇ ಮೇ.21ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಒನಕೆ ಓಬವ್ವ ವೃತ್ತದಲ್ಲಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡುವರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

# ಮನುಷ್ಯನ ಅಂಗಾಂಗ ದಾನ ಪುಣ್ಯದ ಕೆಲಸ



» ಚಿತ್ರದುರ್ಗ

ದಾನವೆಂದರೆ ಕೇವಲ ರಕ್ತದಾನವಲ್ಲ. ದೇಹದ ಪ್ರತಿಯೊಂದು ಅಂಗಾಂಗಗಳನ್ನು ದಾನ ಮಾಡಿ ಮತ್ತೊಬ್ಬರ ಪ್ರಾಣ ಉಳಿಸಬಹುದೆಂದುಆಯುಷ್‌ಇಲಾಖೆಯ ಡಾ.ಶಿವಕುಮಾರ್ ತಿಳಿಸಿದರು.

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ದಿ ಸಂಘದಿಂದ ಹೊಳಲ್ಕೆರೆ ರಸ್ತೆಯಲ್ಲಿರುವ ಸಂಘದ ಕಚೇರಿ ಬಳಿ ಮಂಗಳವಾರ ನಡೆದ

ಕಾರ್ಮಿಕ ದಿನಾಚರಣೆಯಲ್ಲಿ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.

ಮನುಷ್ಯ ನಿಧನದ ನಂತರ ಇಡಿ ದೇಹವನ್ನೇ ಆಸ್ಪತ್ರೆಗೆ ದಾನ ಮಾಡಬಹುದು. ಮರಣದ ನಂತರ ದೇಹವನ್ನು ಮಣ್ಣಿನಲ್ಲಿ ಹೂಳುವ ಬದಲು ಕಣ್ಣುಗಳನ್ನು ದಾನ ಮಾಡಿ ಅಂಧರ ಬಾಳಿಗೆ ಬೆಳಕಾಗಬಹುದು. ಅದೇ ರೀತಿ ಜೀವಿತ ಅವಧಿಯಲ್ಲಿ ಒಂದು ಕಿಡ್ನಿಯನ್ನು ಮತ್ತೊಬ್ಬರಿಗೆ ನೀಡಬಹುದು. ಹೀಗೆ ದಾನ ಮಾಡುವುದರಿಂದ ಸಾವು-ಬದುಕಿನ ನಡುವೆ ಹೋರಾಡುವ ಇನ್ನೊಂದು ಜೀವ ಉಳಿಸಿದ ಪುಣ್ಯ ಪ್ರಾಪ್ತಿಯಾಗುತ್ತದೆಂದು ಹೇಳಿದರು.

ಹದಿನೆಂಟು ವರ್ಷ ಮೇಲ್ಪಟ್ಟ ಅರವತ್ತು ವರ್ಷದೊಳಗಿನ ಆರೋಗ್ಯವಂತರು ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ಲಂಗ್ಸ್, ಕಿಡ್ನಿ, ಹೃದಯ ಹಾಗೂ ಲಿವರ್, ಕೈ-ಕಾಲು, ಬೋನ್ ಮ್ಯಾರೋವನ್ನು ಕೂಡ ದಾನ ಮಾಡಬಹುದು. ಹಾಗಾಗಿ ಪ್ರತಿಯೊಬ್ಬರು ಅಂಗಾಂಗ ದಾನಕ್ಕೆ ಮುಂದಾಗಿ ಎಂದು ಡಾ.ಶಿವಕುಮಾರ್ ಮನವಿ ಮಾಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಮಾತನಾಡುತ್ತ ಅಂಗಾಂಗ ದಾನ ನಿಜವಾಗಿಯೂ ಪುಣ್ಯದ ಕೆಲಸ. ಇದರಿಂದ ಸಾವಿನ ನಂತರವೂ ಜೀವಂತವಾಗಿಟ್ಟಿರುತ್ತದೆ. ಅಂಗಾಂಗ ದಾನದಿಂದ ಮತ್ತೊಂದು ಜೀವ ಉಳಿಸಿದಂತಾಗುತ್ತದೆ ಹೇಳಿದರು.

ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಟಿ ಮಾತನಾಡಿ ಪಿಂಚಣಿ, ಕಾರ್ಮಿಕರ ಮಕ್ಕಳ ಶಿಕ್ಷಣ ಹಾಗೂ ವಿವಾಹಕ್ಕೆ ಧನ ಸಹಾಯಕ್ಕಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಸರಿಯಾಗಿ ಹೆಸರನ್ನು ದಾಖಲಿಸಬೇಕು. ಒಂದು ವೇಳೆ ಹೆಸರಿನಲ್ಲಿ ವ್ಯತ್ಯಾಸವಾದರೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯಲು ಕಷ್ಟವಾಗುತ್ತದೆ. ಪಿಂಚಣಿ, ಮರಣಕ್ಕೆ ಸಂಬಂಧಿಸಿದಂತೆ ಕಾರ್ಮಿಕರ ಕಲ್ಯಾಣ ಮಂಡಳಿಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸುತ್ತೇನೆ. ಶೈಕ್ಷಣಿಕ ಧನ ಸಹಾಯಕ್ಕಾಗಿ ಸಲ್ಲಿಸಿರುವ ಅರ್ಜಿಗಳ ಮರು ಪರಿಶೀಲನೆಯಾಗಬೇಕು. ನೊಂದಣಿ, ನವೀಕರಣದ ಸಂದರ್ಭದಲ್ಲಿ ಹೆಸರುಗಳು ತಪ್ಪಾಗದಂತೆ ಎಚ್ಚರ ವಹಿಸುವಂತೆ ಕಾರ್ಮಿಕರಿಗೆ ಕರೆ ನೀಡಿದರು.

ಮಾನ್ಯತೆ ಪಡೆದ ಆಸ್ಪತ್ರೆಗಳಲ್ಲಿ ಯಾವುದಾದರೂ ಕಾಯಿಲೆಗಳಿಗೆ ಚಿಕಿತ್ಸೆ ಪಡೆದಾಗ ಮಾತ್ರ ಧನ ಸಹಾಯ ಸಿಗುತ್ತದೆ. 55 ವರ್ಷಗಳ ನಂತರ ಕಾರ್ಮಿಕರು ಗುರುತಿನ ಚೀಟಿಗಳನ್ನು ಕಡ್ಡಾಯವಾಗಿ ನವೀಕರಿಸಿಕೊಂಡಾಗ ಮಾತ್ರ ಪಿಂಚಣಿ ಇನ್ನಿತರೆ ಸೌಲಭ್ಯಗಳನ್ನು ಪಡೆದುಕೊಳ್ಳಲು ಸುಲಭವಾಗುತ್ತದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವೈ. ಕುಮಾರ್ ಮಾತನಾಡಿ ರಾಜ್ಯದಲ್ಲಿ ನಲವತ್ತು ಲಕ್ಷ ಗುರುತಿನ ಚೀಟಿಗಳಿದ್ದು, ಈಗ ಇಪ್ಪತ್ತು ಲಕ್ಷಕ್ಕೆ ಇಳಿದಿದೆ. ಜಿಲ್ಲೆಯಲ್ಲಿದ್ದ 1.50 ಲಕ್ಷ ಕಾರ್ಮಿಕರ ಗುರುತಿನ ಚೀಟಿ 60 ಸಾವಿರಕ್ಕೆ ಬಂದಿದೆ. ಇಪ್ಪತ್ತೈದರಿಂದ ಮೂವತ್ತು ಸಾವಿರದಷ್ಟು ನಿಜವಾದ ಕಾರ್ಮಿಕರು ಜಿಲ್ಲೆಯಲ್ಲಿರಬಹುದು. ಕಟ್ಟಡ ಕಾರ್ಮಿಕರಿಗೆ ಗುರುತಿನ ಚೀಟಿಯಿಲ್ಲದಂತಾಗಿದೆ. ಕಾರ್ಮಿಕರಿಗೆ ಸರ್ಕಾರ ವಿಧಿಸಿರುವ ಮಾನದಂಡಗಳು ಕಠಿಣವಾಗಿರುವುದರಿಂದ ಸರಳೀಕರಣಗೊಳಿಸುವಂತೆ ಕಾರ್ಮಿಕ ಅಧಿಕಾರಿಯವರಲ್ಲಿ ವಿನಂತಿಸಿದರು.

ಕಾರ್ಮಿಕರಿಗೆ ಅನೇಕ ತಿಂಗಳುಗಳಿಂದ ಪಿಂಚಣಿ ಬಂದಿಲ್ಲ. ಮನೆ ಕಟ್ಟಿಕೊಳ್ಳಲು ಹಣ ನೀಡುತ್ತಿಲ್ಲ. ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕೋಟ್ಯಾಂತರ ರೂ.ಗಳ ಹಣವಿದ್ದರೂ ನಿಜವಾದ ಕಾರ್ಮಿರಿಗೆ ಸಿಗುತ್ತಿಲ್ಲ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿವೆ. ನಕಲಿ ಕಾರ್ಮಿಕರ ಹಾವಳಿ ನಿಲ್ಲಬೇಕು. ಪ್ರತಿ ಜಿಲ್ಲೆಯಲ್ಲಿ ಕಾರ್ಮಿಕ ಭವನಗಳ ನಿರ್ಮಾಣವಾಗಬೇಕು. ಕಾರ್ಮಿಕರ ಮಕ್ಕಳಿಗೆ ನೀಡುತ್ತಿದ್ದ ವಿದ್ಯಾರ್ಥಿ ವೇತನ ತಡೆಹಿಡಿಯಲಾಗಿದೆ. ನಿಮ್ಮ ಪಾಲಿನ ಹಕ್ಕುಗಳನ್ನು ಪಡೆಯಬೇಕಾದರೆ ಕಡ್ಡಾಯವಾಗಿ ಕಾರ್ಮಿಕರು ಗುರುತಿನ ಚೀಟಿಗಳನ್ನು ಪಡೆದುಕೊಳ್ಳುವಂತೆ ತಿಳಿಸಿದರು.

ಕಾರ್ಮಿಕ ನಿರೀಕ್ಷಕ ಟಿ.ಬೀಮೇಶ್, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಉಪ ಸಭಾಪತಿ ಅರುಣ್‌ಕುಮಾರ್, ಸಮೃದ್ದಿ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ವೆಂಕಟೇಶ್ ಟೈಲ್ಸ್ ಮತ್ತು ಗ್ರಾನೈಟ್ ಸಂಘದ ಅಧ್ಯಕ್ಷ ಚಂದ್ರಪ್ಪ ಟಿ. ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ದಿ ಸಂಘದ ರಾಜ್ಯಾಧ್ಯಕ್ಷ ಜೆ.ಮಂಜುನಾಥ್, ಉಪಾಧ್ಯಕ್ಷ ಕೆ.ಗೌಸ್‌ಪೀರ್, ಖಜಾಂಚಿ ಈಶ್ವರಪ್ಪ ಡಿ. ಇವರುಗಳು ವೇದಿಕೆಯಲ್ಲಿದ್ದರು.

## ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಕಾಲೇಜು ನಿವೃತ್ತ ಶಿಕ್ಷಕರ ಸಂಘಗಳ ಒಕ್ಕೂಟ ಜಿಲ್ಲಾ ಘಟಕ ಉದ್ಘಾಟನೆ

» ಚಿತ್ರದುರ್ಗ



ಸಂಘದ ಕಾರ್ಯ ಚಟುವಟಿಕೆ, ಸರ್ವ ಸದಸ್ಯರ ಸಭೆ ಹಾಗೂ 75 ವರ್ಷಗಳನ್ನು ಪೂರೈಸಿರುವ ಸಂಘದ ಸದಸ್ಯ ಪ್ರಾಧ್ಯಾಪಕರುಗಳಿಗೆ ಸನ್ಮಾನ ಸಮಾರಂಭ ಮಾಡಬೇಕಾಗಿರುವುದರಿಂದ ಸದಸ್ಯರುಗಳೆಲ್ಲರು ಸಂಘದೊಂದಿಗೆ ಕೈಜೋಡಿಸುವಂತೆ ಜಿಲ್ಲಾ ಘಟಕದ ಅಧ್ಯಕ್ಷ ಪ್ರೊ.ಟಿ.ಹೆಚ್.ಕೃಷ್ಣಮೂರ್ತಿ ಮನವಿ ಮಾಡಿದರು.

ಆಕಾಶವಾಣಿ ಹಿಂಭಾಗವಿರುವ ಸಂಗಮೇಶ್ವರ ಬಡಾವಣೆಯಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ ಹಾಗೂ ಕಾಲೇಜು ನಿವೃತ್ತ ಶಿಕ್ಷಕರ ಸಂಘಗಳ ಒಕ್ಕೂಟ ಜಿಲ್ಲಾ ಘಟಕದ ಕಚೇರಿ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ರಾಜ್ಯದ ವಿವಿಧ ಘಟಕಗಳ ಪೈಕಿ ಚಿತ್ರದುರ್ಗ ಜಿಲ್ಲಾ ಘಟಕ ತನ್ನದೆ ಆದ ಸ್ವಂತ ಕಚೇರಿಯನ್ನು ಹೊಂದಿದೆ. ಮುಂದಿನ ರೂಪುರೇಷೆಗಳಿಗೆ ಸಂಬಂಧಿಸಿದಂತೆ ಸದಸ್ಯರುಗಳು ಕಾರ್ಯಪ್ರವೃತ್ತರಾಗುವಂತೆ ತಿಳಿಸಿದರು.ಸಂಘದ ಗೌರವಾಧ್ಯಕ್ಷ ಜೆ.ಮಹಾಂತೇಶ್ ಮಾತನಾಡಿ ಮುಂದೆ ದೊಡ್ಡ ಕಾರ್ಯಗಳನ್ನು ಕೈಗೊಳ್ಳಬೇಕಾಗಿರುವುದರಿಂದ ಸಂಘದ ಪ್ರತಿಯೊಬ್ಬ ಸದಸ್ಯರುಗಳ ಮೇಲೆ ಜವಾಬ್ದಾರಿಯಿದೆ. ಹಾಗಾಗಿ ಸಂಘಕ್ಕೆ ಬಲ ತುಂಬುವತ್ತ ಗಮನ ಕೊಡಬೇಕೆಂದು ಹೇಳಿದರು.ವಿಶ್ರಾಂತ ಪ್ರಾಧ್ಯಾಪಕರಾದ ಡಾ.ನಟರಾಜ್ ಮಾತನಾಡಿ ಚಿತ್ರದುರ್ಗದಲ್ಲಿ ವಾರ್ಷಿಕ ಸಮ್ಮೇಳನ ನಡೆಸಬೇಕಿದೆ. ಹದಿನೈದು ದಿನಗಳಿಂದಲೂ ಎಲ್ಲರಿಗೂ ಮೆಸೇಜ್ ಮೇಲೆ ಮೆಸೇಜ್ ಹಾಕಲಾಗಿದೆ. ಪ್ರತಿಯೊಬ್ಬರು ಸ್ವಇಚ್ಛೆಯಿಂದ ಸಂಘದ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕಾಗಿರುವುರಿಂದ ಆತ್ಮವಿಮರ್ಶೆ ಮಾಡಿಕೊಳ್ಳಬೇಕಾಗಿದೆ. ಇಲ್ಲದಿದ್ದರೆ ಸಂಘಟನೆ ಕಷ್ಟವಾಗುತ್ತದೆ. ಇಬ್ಬರು ಪದಾಧಿಕಾರಿಗಳ ಭಿನ್ನಾಭಿಪ್ರಾಯಕ್ಕೆ ಪ್ರತಿಕ್ರಿಯಿಸುವ ಅವಶ್ಯಕತೆಯಿಲ್ಲ. ಸಹಾಯ, ಸಂಪನ್ಮೂಲ ವಿನಿಯೋಗಿಸಿಕೊಂಡು ಸಂಘವನ್ನು ಬಲಪಡಿಸೋಣ ಎಂದು ನುಡಿದರು. ಡಾ.ಎ.ಗೋಪಾಲ್, ಖಜಾಂಚಿ ಶಿವಪ್ಪ, ಡಾ.ಎಂ. ಕೆ.ಪ್ರಭುದೇವ್, ಸಹ ಕಾರ್ಯದರ್ಶಿ ಬಸವರಾಜ್ ಇವರುಗಳು ವೇದಿಕೆಯಲ್ಲಿದ್ದರು.

ನಿವೃತ್ತ ಪ್ರಾಚಾರ್ಯರಾದ ಹರೀಶ್ ಜಿಲ್ಲಾ ಘಟಕದ ಕಚೇರಿ ಉದ್ಗಾಟಿಸಿದರು.ಗೋಪಾಲ್ ಸ್ವಾಗತಿಸಿದರು. ನಾಗರಾಜ್ ನಿರೂಪಿಸಿದರು.

## ಹವಾಮಾನ ಅವಲೋಕನ ಸಮಿತಿ ಸಭೆ



» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಮಂಗಳವಾರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಹಾಗೂ ಹವಾಮಾನ ಅವಲೋಕನ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ವಿಡಿಯೋ ಸಂವಾದದ ಮೂಲಕ ರಾಜ್ಯಮಟ್ಟದ ಹವಾಮಾನ ಅವಲೋಕನ ಸಮಿತಿ ಸಭೆ ನಡೆಯಿತು. ಇತ್ತೀಚೆಗೆ ಮಳೆಯಿಂದ ಉಂಟಾದ ಮನೆ ಹಾನಿ ಕುರಿತು ಕೈಗೊಂಡ ಕ್ರಮಗಳು, ಪ್ರಸ್ತುತ ಹವಾಮಾನ ಪರಿಸ್ಥಿತಿ, ಮಳೆ ಮುನ್ಸೂಚನೆ, ಕೃಷಿ ಪರಿಸ್ಥಿತಿ, ಜಲಾಶಯಗಳ ನೀರಿನ ಸಂಗ್ರಹಣಾ ಸ್ಥಿತಿ, ಸಣ್ಣ ನೀರಾವರಿ ಕೆರೆಗಳ ನೀರಿನ ಸಂಗ್ರಹಣೆ ಹಾಗೂ ಅಂತರ್ಜಲಮಟ್ಟ, ನರೇಗಾ ಪ್ರಗತಿ, ರಾಜ್ಯ ವಿಪತ್ತು ಉಪಶಮನ ನಿಧಿ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಡಾ.ಕುಮಾರ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಸೋಮಶೇಖರ್ ವಿ ಅಗಡಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಸಾಯಿಬಾಬಾ ಮಂದಿರದಲ್ಲಿ ಲೋಕಕಲ್ಯಾರ್ಣವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು

» ಚಳ್ಳಕೆರೆ



ನಗರದ ಪಾವಗಡ ರಸ್ತೆಯ ಸಾಯಿನಗರದಲ್ಲಿರುವ ಶ್ರೀಸಾಯಿಬಾಬಾ ದೇವಸ್ಥಾನದಲ್ಲಿ ಲೋಕಕಲ್ಯಾರ್ಣವಾಗಿ ಮೇ.19ರಿಂದ 22 ತನಕ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ವೆಂಕಟಸಾಯಿ ಸೇವಾಟ್ರಸ್ಟ್‌ನ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ತಿಳಿಸಿದರು. ಅವರು, ಮಂಗಳವಾರ ಬೆಳಗ್ಗೆ ಸಾಯಿಬಾಬಾ ಮಂದಿರದಲ್ಲಿ ನಡೆದ ಚಂಡಿಕಾಹೋಮ ಸೇರಿದಂತೆ ಇತರೆ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಈ ಬಾರಿ ಭಕ್ತಾಧಿಗಳ ಕೋರಿಕೆಯಂತೆ ಒಟ್ಟು ನಾಲ್ಕು ದಿನಗಳ ಕಾಲ ವಿಶೇಷ ಧಾರ್ಮಿಕ ಕಾರ್ಯಕ್ರಮ ಆಯೋಜಿಸಿದ್ದು ಕೇರಳ ಕಾಸರಗೂಡಿನ ಖ್ಯಾತ ಪುರೋಹಿತ ನಾಗೇಂದ್ರಭಟ್ ಮತ್ತು ತಂಡ ಪೂಜಾ ಕಾರ್ಯಕ್ರಮ ನಡೆಸಿಕೊಡಲಿದೆ. ನರಹರಿ ಸದ್ಗುರು ಆಶ್ರಮದ ಡಾ.ರಾಜರಾಮ್, ಶಾರದಾಶ್ರಮದ ಮಾತಾಜಿತ್ಯಾಗಮಯಿ, ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್‌ಗೌತಮ್, ಪುರೋಹಿತ ಶಿವಕುಮಾರ್‌ಶರ್ಮ ಸೇರಿದಂತೆ ಹಲವಾರು ಗಣ್ಯರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಲೋಕಾಕಲ್ಯರ್ಣಾಥವಾಗಿ ನಡೆಸುವ ಧಾರ್ಮಿಕಕಾರ್ಯಕ್ರಮಗಳಿಗೆಭಕ್ತರುಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಶ್ರೀಮಂದಿರದಲ್ಲಿ ನಡೆದ ಚಂಡಿಕಾಹೋಮ, ಸುಹಾಸಿನಿ ಪೂಜೆ, ಸುದರ್ಶನಹೋಮ, ಅಘೋಶಾಸ್ತ್ರ ಹೋಮ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

**ಪ್ರಮುಖ ಸುದ್ದಿ**

# ಗೊಬ್ಬರ ಅಂಗಡಿ ಮಾಲೀಕರು ಈರುಳ್ಳಿ ಬೀಜ ಮಾರಾಟಕ್ಕೆ ಕಡ್ಡಾಯ ಪರವಾನಿಗೆಯನ್ನು ಪಡೆಯಬೇಕು: ವಿರೂಪಾಕ್ಷಪ್ಪ

» ಚಳ್ಳಕೆರೆ



ತಾಲ್ಲೂಕಿನಾದ್ಯಂತ ಮುಂಗಾರು ಮಳೆ ಚುರುಕುಗೊಂಡ ಹಿನ್ನೆಲೆಯಲ್ಲಿ ರೈತರು ತಮ್ಮ ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದು ಈಗಾಗಲೇ ಜಮೀನುಗಳನ್ನು ಹಸನುಗೊಳಿಸುವ ಕಾರ್ಯದಲ್ಲಿ ಮುಂದಾಗಿದ್ದಾರೆ. ಇನ್ನೂ ಕೆಲವೇ ದಿನಗಳಲ್ಲಿ ಬಿತ್ತನೆ ಕಾರ್ಯ ಶುರುವಾಗಲಿದ್ದು ನಕಲಿ ಜೀಜ ಮಾರಾಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೃಷಿ ಇಲಾಖೆ ಸಭಾಂಗಣದಲ್ಲಿ ಗೊಬ್ಬರ ಅಂಗಡಿ ಮಾಲೀಕರ ಸಭೆಯನ್ನು ಆಯೋಜಿಸಲಾಗಿತ್ತು.

ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಟಿ.ವಿರೂಪಾಕ್ಷಪ್ಪ ಸಭೆಗೆ ಚಾಲನೆ ನೀಡಿ ಮಾತನಾಡಿ, ಕಳೆದ ಕೆಲವು ವರ್ಷಗಳಿಂದ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಈರುಳ್ಳಿ ಬೆಳೆ ಸಂಪೂರ್ಣ ನೆಲಕಚ್ಚಿ ರೈತರು ಲಕ್ಷಾಂತರ ನಷ್ಟ ಅನುಭವಿಸಿದ್ದಾರೆ. ಇದಕ್ಕೆ ಮೂಲಕಾರಣ ನಕಲಿ ಈರುಳ್ಳಿ ಬೀಜ ಮಾರಾಟವಾಗಿದೆ. ಈ ಹಿನ್ನೆಲೆಯಲ್ಲಿ ಗೊಬ್ಬರ ಅಂಗಡಿಮಾಲೀಕರು ತಮ್ಮ ಅಂಗಡಿಗಳಲ್ಲಿ ಈರುಳ್ಳಿ ಬೀಜ ಮಾರಾಟ ಮಾಡಲು ಕಡ್ಡಾಯವಾಗಿ ತೋಟಗಾರಿಕೆ ಇಲಾಖೆಯಿಂದ ಅನುಮತಿಪತ್ರವನ್ನು ಪಡೆಯಲೇಬೇಕು. ಅನುಮತಿ ಪಡೆಯದೆ ಈರುಳ್ಳಿ ಬೀಜ ಮಾರಾಟ ಮಾಡಲು ಯತ್ನಿಸಿದರೆ ಅಂತಹ ಗೊಬ್ಬರದ ಅಂಗಡಿಗಳನ್ನು ಸೀಜ್ ಮಾಡಿ ಮಾಲೀಕರ ವಿರುದ್ದ ಕಠಿಣ ಕಾನೂನು ಕ್ರಮಕೈಗೊಂಡು ಅಂಗಡಿಯ ಲೈಸನ್ಸ್ ವಜಾಮಾಡಲು ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು ಎಂದು ತಿಳಿಸಿದರು. ಈಗಾಗಲೇ ಸರ್ಕಾರ ಸ್ಪಷ್ಟ ಪಡಿಸಿದಂತೆ ಯಾವುದೇ ಸಂದರ್ಭದಲ್ಲಿ ನಕಲಿ ಬೀಜಗಳನ್ನು ಗೊಬ್ಬರ ಅಂಗಡಿಗಳಲ್ಲಿ ರೈತರಿಗೆ ಮಾರಾಟ ಮಾಡುವಂತಿಲ್ಲ, ಒಂದು ಲಕ್ಷ ರೈತರು ನೇರವಾಗಿ ಬಂದು ಕೇಳಿದರೆ ನೀವು ಇಲಾಖೆಯ ಗಮನಕ್ಕೆ ತರಬೇಕಿದೆ. ಯಾವುದೇ ಕಾರಣಕ್ಕೂ ನಿಯಮಗಳ ಉಲ್ಲಂಘನೆಯನ್ನು ಇಲಾಖೆ ಸಹಿಸದು ಎಂದರು.

ಸಹಾಯಕಕೃಷಿನಿರ್ದೇಶಕಜೆ.ಅಶೋಕ್ ಅಧ್ಯಕ್ಷತೆ ವಹಿಸಿ ಮಾತನಾಡಿದರು, ಗೊಬ್ಬರ ಅಂಗಡಿ ಮಾಲೀಕರ ಸಂಘದ ತಾಲ್ಲೂಕು ಅಧ್ಯಕ್ಷ ಜಗದೀಶ್, ಉಪಾಧ್ಯಕ್ಷ ಮಂಜುನಾಥ ಹಾಗೂ ವಿವಿಧ ಗೊಬ್ಬರದ ಅಂಗಡಿ ಮಾಲೀಕರು ಸಭೆಯಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಕೋಳಿ ಸಾಕಾಣಿಕೆ ತರಬೇತಿ

» **ಚಿತ್ರದುರ್ಗ**

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ನಗರದ ಪ್ರಧಾನ ಅಂಚೆ ಕಚೇರಿ ಪಕ್ಕದ ಪಶುಆಸ್ಪತ್ರೆ ಆವರಣದಲ್ಲಿರುವ ಪಶುಪಾಲನ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಇದೇ ಮೇ 28 ರಿಂದ 29 ರವರೆಗೆ "ಕೋಳಿ ಸಾಕಾಣಿಕೆ ವೈಜ್ಞಾನಿಕ ತರಬೇತಿ" ಹಮ್ಮಿಕೊಳ್ಳಲಾಗಿದೆ. ಈ ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ನೀಡಲಾಗುವುದಿಲ್ಲ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 3 ಪಾಸ್‌ಪೋರ್ಟ್ ಸೈಜ್ ಪೋಟೋ, ಬ್ಯಾಂಕ್ ಪಾಸ್ ಬುಕ್ ಪ್ರತಿ ತರಬೇಕು. ಪರಿಶಿಷ್ಟ ಜಾತಿ, ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ತರಬೇಕು. ತರಬೇತಿ ನೀಡಲು 25 ಜನರ ಗುರಿ ನಿಗಧಿಪಡಿಸಲಾಗಿದೆ. ಹೆಚ್ಚಿನ ವಿವರಕ್ಕಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ಚಿತ್ರದುರ್ಗ ಅವರ ದೂರವಾಣಿ ಸಂಖ್ಯೆ 9482943111, 9886002248 ಗೆ ಸಂಪರ್ಕಿಸಲು ಕೋರಿದೆ. ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ರೈತರು ಮುಂಚಿತವಾಗಿ ವಾಟ್ಸಪ್ ಮೂಲಕ ತಮ್ಮ ಹೆಸರು ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ನೊಂದಾವಣೆ ಮಾಡಿಕೊಳ್ಳಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ತಾಲೂಕು ಮಾದಿಗ ಸಮಾಜದ ಅಧ್ಯಕ್ಷರಾಗಿ ನಾಕಿಕೆರೆ ತಿಪ್ಪಯ್ಯ ಆಯ್ಕೆ



» **ಹೊಸದುರ್ಗ**

ತಾಲೂಕು ಮಾದಿಗ ಸಮಾಜದ ನೂತನ ಅಧ್ಯಕ್ಷರಾಗಿ ನಾಕಿಕೆರೆ ತಿಪ್ಪಯ್ಯ ಅವರು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ, ಉಪಾಧ್ಯಕ್ಷರಾಗಿ ಶ್ರೀರಾಂಪುರ ಕೃಷ್ಣಮೂರ್ತಿ, ಗೌರವಾಧ್ಯಕ್ಷರಾಗಿ ವಕೀಲ ಬೀಸನಹಳ್ಳಿಜಯಪ್ಪ, ಕಾರ್ಯದರ್ಶಿಯಾಗಿ ಮಳಲಿಶೇಖರಪ್ಪ, ಖಜಾಂಚಿಯಾಗಿ ದುರ್ಗೇಶ್‌ಕಂಚೀಪುರ,ಕಾನೂನು ಸಲಹೆಗಾರರಾಗಿ ವಕೀಲರುಗಳಾದ ಮೈಲಾರಪ್ಪ, ಜ್ಞಾನೇಶ್, ಜಿ. ರಂಗಸ್ವಾಮಿ ಹಾಗೂ ನಿರ್ದೇಶಕರುಗಳನ್ನಾಗಿ ಎಂ.ಜಿ.ದಿಬ್ಬ ಕರಿಯಪ್ಪ, ಆದ್ರಿಕಟ್ಟೆಕುಮಾರಪ್ಪ, ಜೆ.ಆರ್.ತಿಪ್ಪೇಸ್ವಾಮಿ, ಶ್ರೀರಾಂಪುರಶಿವಣ್ಣ, ಹೆಗ್ಗೆರೆ ಶಂಕರಪ್ಪ, ಕಾರೇಹಳ್ಳಿಮಂಜುನಾಥ್ ,ಲಕ್ಕಿಹಳ್ಳಿಮುದ್ದಪ್ಪ, ಹೊನ್ನೇನಹಳ್ಳಿಮಾರುತಿ, ಕಪ್ಪಗೆರೆಲಕ್ಕಪ್ಪ, ಜೋಡಿಶ್ರೀರಾಂಪುರ ಕೆ.ತಿಮ್ಮಪ್ಪ, ಆರ್.ಸುರೇಶ್,ಕರಡಿ ಬಸವರಾಜ್, ದೊಡ್ಡಯ್ಯ, ದುರುಗೇಶಪ್ಪ, ಮಲ್ಲಿಖಾರ್ಜುನ ಹಾಗೂ ಗೂಳಿಹಟ್ಟಿಕೃಷ್ಣಮೂರ್ತಿ ಇವರುಗಳು ಅಯ್ಕೆಯಾಗಿದ್ದಾರೆ. ಪಟ್ಟಣದ ಬಾಬು ಜಗಜೀವನ್‌ರಾಂ ಭವನದಲ್ಲಿ ಮಂಗಳವಾರ ಕೈನಡು ಚಂದ್ರಪ್ಪ ಅವರ ಅಧ್ಯಕ್ಷತೆಯಲ್ಲಿ ಸಭೆಯನ್ನ ನಡೆಸಿ ಆಯ್ಕೆ ಮಾಡಲಾಯಿತು. ಈ ಸಂಧರ್ಬದಲ್ಲಿ ಸಮಾಜದ ಮಾಜಿ ಅಧ್ಯಕ್ಷ ಆರ್. ತಿಪ್ಪಯ್ಯ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ರಾಜಣ್ಣ, ಪುರಸಭಾ ಸದಸ್ಯ ದೊಡ್ಡಯ್ಯ, ಪುಟ್ಟಪ್ಪ, ರುದ್ರಪ್ಪ, ದುರ್ಗೇಶಪ್ಪ,ಮಾದಿಗ ಮಹಾಸಭಾದ ಅಧ್ಯಕ್ಷ ಈ.ರಂಗಪ್ಪ ಮತ್ತಿತರರು ಉಪಸ್ಥಿತರಿದ್ದರು.

### ದೇವಲ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» **ಹೊಸದುರ್ಗ**

ಪ್ರತಿವರ್ಷದಂತೆ ಈ ಬಾರಿಯೂ ತಾಲೂಕಿನ ದೇವಾಂಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲು ತಾಲೂಕು ದೇವಾಂಗ ನೌಕರರ ಸಂಘವು ಅರ್ಜಿ ಆಹ್ವಾನಿಸಿದೆ. 2024–25ನೇ ಸಾಲಿನ ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 85ಕ್ಕಿಂತ ಹೆಚ್ಚು ಅಂಕ ಪಡೆದ ಹೊಸದುರ್ಗ ತಾಲೂಕಿನ ದೇವಾಂಗ ಸಮಾಜದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಗಳು ಹೊಸದುರ್ಗ ನಗರದ ಬನಶಂಕರಿ ಬ್ಯಾಂಕಿನಲ್ಲಿ ಸಿಗುತ್ತವೆ. ಅರ್ಜಿ ಜೊತೆಗೆ ಅಂಕಪಟ್ಟಿ, ಆಧಾರ ಕಾರ್ಡ್ ಜೆರಾಕ್ಸ್, ಇತ್ತೀಚಿನ ಎರಡು ಪಾಸ್ ಫೋಟೋ ಸಹಿತ ಅರ್ಜಿಯನ್ನು ಇದೇ ಜೂನ್ 15ರ ಒಳಗೆ ಬನಶಂಕರಿ ಬ್ಯಾಂಕಿಗೆ ಸಲ್ಲಿಸಲು ದೇವಾಂಗ ನೌಕರರ ಸಂಘದ ಅಧ್ಯಕ್ಷ ಎಸ್. ಚಂದ್ರಶೇಖರ್ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ

» **ದಾವಣಗೆರೆ**

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮೇ.22 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಆಪರೇಷನ್ ಸಿಂಧೂರ ಯಶಸ್ವಿ ಹಿನ್ನೆಲೆ: 500 ಮೀಟರ್ ರಾಷ್ಟ್ರಧ್ವಜ ಮೆರವಣಿಗೆ





» **ಚಳ್ಳಕೆರೆ**

ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಕಳೆದ ಏ.22ರಂದು ಪಾಕಿಸ್ತಾನ ಬೆಂಬಲಿತ ಉಗ್ರಗಾಮಿಗಳು 26 ಯಾತ್ರಾತ್ರಿಗಳನ್ನು ಹತ್ಯೆಗೈದ ಉಗ್ರಗಾಮಿಗಳಿಗೆ ತಕ್ಕ ಉತ್ತರ ನೀಡಿದ ನಮ್ಮ ಸೈನಿಕರ ಪರಾಕ್ರಮ ಇತರೆ ದೇಶಗಳಿಗೂ ನಡುಕ ಹುಟ್ಟಿಸಿದೆ ಎಂದು ತಾಲ್ಲೂಕು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಗೋವಿಂದರೆಡ್ಡಿ ತಿಳಿಸಿದರು.

ಅವರು, ಮಂಗಳವಾರ ನೆಹರೂ ವೃತ್ತದಲ್ಲಿ ಆಪರೇಷನ್ ಸಿಂಧೂರ ತಿರಂಗ ಯಾತ್ರೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ರಾಷ್ಟ್ರ ಸೇವಿಕ ಸಮಿತಿ ಜಿಲ್ಲಾ ಕಾರ್ಯವಾಹ ಕುಸುಮದೇಸಾಯಿ ಮಾತನಾಡಿ, ಆಪರೇಷನ್ ಸಿಂಧೂರ



ಹೆಸರು ಇಂದು ವಿಶ್ವಮನ್ನಣೆ ಗಳಿಸಿದೆ. ಕಾರಣ, ನಿರ್ಧಯವಾಗಿ ಹೆಣ್ಣು ಮಕ್ಕಳ ಮುಂದೆಯೇ ಅವರ ಗಂಡರನ್ನು ಹೆಣವಾಗಿಸಿದ ಉಗ್ರಗಾಮಿಗಳ ಹೀನಾಕೃತ್ಯಕ್ಕೆ ಉತ್ತರ ನೀಡಲು ಆಪರೇಷನ್ ಸಿಂಧೂರ ಕಾರ್ಯಚರಣೆ ಮಾಡಲಾಗಿದೆ. ಹೆಣ್ಣು ಮಕ್ಕಳ ಮಾಂಗಲ್ಯದ ಗೌರವವನ್ನು ತಿಳಿಯದ, ಅರಿಯದ ಉಗ್ರಗಾಮಿಗಳು ಇಂತಹ ಹೀನಕೃತ್ಯಕ್ಕೆ ಕೈಹಾಕಿದ್ದಾರೆ.

ಆದರೆ, ನಮ್ಮ ಸೈನಿಕರು ನೂರಾರು ಉಗ್ರರನ್ನು ಹುಡುಕಿ, ಹುಡುಕಿ ಕೊಂದಿದ್ದಾರೆ.

ಸಿಂಧೂರ ಪ್ರತಿಯೊಬ್ಬ ಹಿಂದೂ ಮಹಿಳೆಯ ಸೌಭಾಗ್ಯದ ಸಂಕೇತವಾಗಿದೆ. ಇಂತಹ ಸಂಕೇತವನ್ನು ಅವಮಾನಿಸುವ ಕೃತ್ಯವನ್ನು ಯಾರೂ ಮಾಡಬಾರದು ಎಂದರು.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಜಿಲ್ಲಾ ಬೌದ್ಧಿಕ್ ಪ್ರಮುಖ್ ಅಭಿಲಾಷ್ ಪಂಡ್ರಹಳ್ಳಿ ಮಾತನಾಡಿ, ಇಂದು ಇಲ್ಲಿ ನಡೆಯುತ್ತಿರುವ ತಿರಂಗಯಾತ್ರೆಗೆ ಸ್ವಯಂ ಪ್ರೇರಣೆಯಿಂದ ಸಾವಿರಾರು ಸಂಖ್ಯೆಯಲ್ಲಿ ಸ್ವಯಂ ದೇಶದ ಅಭಿಮಾನಿಗಳು ರಸ್ತೆಗಿಳಿದು ಭಾರತೀಯ ಸೈನಿಕರಿಗೆ ನಮನಗಳನ್ನು ಸಲ್ಲಿಸುವುದಲ್ಲದೆ, ಅವರಿಗೆ ಕೃತಜ್ಞತೆಗಳನ್ನು ಈ ಮೂಲಕ ತಿಳಿಸಿದ್ಧಾರೆ ಎಂದರು.

ತಿರಂಗಯಾತ್ರೆಯಲ್ಲಿ ತಾಲ್ಲೂಕು ವಿಶ್ವಹಿಂದೂಪರಿಷತ್ ಅಧ್ಯಕ್ಷ ಡಾ.ಡಿ.ಎನ್. ಮಂಜುನಾಥ,ಭಜರಂಗದಳದ ಉಮೇಶ್, ಕೃಷ್ಣ, ಮಹಂತೇಶ್, ಮಾಜಿಸೈನಿಕ ಶಿವಮೂರ್ತಿ, ತಿಮ್ಮಣ್ಣ, ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಬಿಜೆಪಿ ಮುಖಂಡರಾದ ಸಿ.ಎಸ್.ಪ್ರಸಾದ್, ಕೆ.ಟಿ.ಕುಮಾರಸ್ವಾಮಿ, ಜೆ.ಪಿ.ಜಯ ಪಾಲಯ್ಯ, ಎನ್.ರಘುಮೂರ್ತಿ, ಡಿ.ಸೋಮಶೇಖರಮಂಡಿಮಠ, ಮಾತಾಜಿತ್ಯಾಗಮಯಿ ಮುಂತಾದವರು ಉಪಸ್ಥಿತರಿದ್ದರು.

## ತಾಲ್ಲೂಕಿನ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದ ಹೊಸದುರ್ಗ ಶಾಸಕ ಗೋವಿಂದಪ್ಪ

» **ಹೊಸದುರ್ಗ**

ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ ಗೋವಿಂದಪ್ಪ ಸೋಮವಾರ ತಾಲೂಕಿನ ಹೆಬ್ಬಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕೃಷ್ಣಾಪುರ ಗ್ರಾಮದ ಶ್ರೀ ಮಾರಿಕಾಂಭ ದೇವಸ್ಥಾನ ಮತ್ತು ಭೂತೇಶ್ವರ ಸ್ವಾಮಿ ದೇವಾಸ್ಥಾನದ ಸುತ್ತ ಮುತ್ತ ಸಿ.ಸಿ ರಸ್ತೆ ನಿರ್ಮಾಣ 20 ಲಕ್ಷಗಳು. ಓವರ್ ಟ್ಯಾಂಕ್ ನಿಂದ ಅಂಗನವಾಡಿ ಕೇಂದ್ರದಿಂದ ಎ.ಕೆ ಕಾಲೋನಿ ಹಾಗೂ ಉಳಿದ ಆಯ್ದ ಭಾಗಗಳಲ್ಲಿ ಸಿ.ಸಿ ರಸ್ತೆ ನಿರ್ಮಾಣ 20ಲಕ್ಷಗಳು, ತುಂಬಿನಕೆರೆ ಗ್ರಾಮದ ನಾಗರಕಟ್ಟೆ ರಸ್ತೆಯಿಂದ ಭಂಡಾರಿ ಗೋವಿಂದಪ್ಪನ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ 10ಲಕ್ಷಗಳ ಭೂಮಿ ಪೂಜೆಯನ್ನ ನೆರವೇರಿಸಿದರು.

ಈ ಸಂದರ್ಭದಲ್ಲಿ ಸಂಭಂದಪಟ್ಟ ಇಲಾಖೆಯವರು ಗ್ರಾಮ ಪಂಚಾಯಿತಿ ಸದಸ್ಯರುಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸ್ಥಳೀಯ ಮುಖಂಡರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು



## ಚಿತ್ರದುರ್ಗ ನಗರಸಭೆ: ಮಳಿಗೆಗಳ ಬಹಿರಂಗ ಹರಾಜು



» **ಚಿತ್ರದುರ್ಗ**

ಚಿತ್ರದುರ್ಗ ನಗರಸಭೆಯ ಸಭಾಂಗಣದಲ್ಲಿ ಮಂಗಳವಾರ ನಗರಸಭೆ ವ್ಯಾಪ್ತಿಯಲ್ಲಿನ ಮಳಿಗೆಗಳ ಬಹಿರಂಗ ಹರಾಜು ಪ್ರಕ್ರಿಯೆ ನಡೆಯಿತು.

ಕಳೆದ ಏಪ್ರಿಲ್ 28ರ ಮಳಿಗೆಗಳ ಬಹಿರಂಗ ಹರಾಜು ಪ್ರಕಟಣೆಯಂತೆ ನಗರಸಭಾ ವ್ಯಾಪ್ತಿಯಲ್ಲಿರುವ ಟೂರಿಸ್ಟ್ ಹೋಟೆಲ್ ಪಕ್ಕದಲ್ಲಿರುವ ಮಳಿಗೆಗಳು, ಸಂತೆ ಹೊಂಡದ ಹತ್ತಿರವಿರುವ ಪೇಪರ್ ಮಳಿಗೆಗಳು, ಎನ್‌ಆರ್‌ವೈ ಮಳಿಗೆಗಳು, ಆರ್‌ಎಂಸಿ ಮಳಿಗೆಗಳು, ಸಿ.ಕೆ.ಪುರ ಯೂಟಿನಿ ಕಾಂಪ್ಲೆಕ್ಸ್ ಆಟೋ ಗ್ಯಾರೇಜ್ ಮಳಿಗೆಗಳು ಸೇರಿ ಒಟ್ಟು 37 ಮಳಿಗೆಗಳಿಗೆ ಬಹಿರಂಗ ಹರಾಜು ಪ್ರಕ್ರಿಯೆ ಹಮ್ಮಿಕೊಳ್ಳಲಾಗಿತ್ತು.

ಉಚ್ಚ ನ್ಯಾಯಾಲಯದಲ್ಲಿ ಎರಡು ಮಳಿಗೆಗಳಿಗೆ ಹಾಗೂ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಒಂದು ಮಳಿಗೆಗೆ ತಡೆಯಾಜ್ಞೆ ಕಾರಣದಿಂದ ಮೂರು ಮಳಿಗೆಗಳನ್ನು ಹೊರತುಪಡಿಸಿ, ಉಳಿದ 34 ಅಂಗಡಿಗಳ ಹರಾಜು ಕರೆಲಾಯಿತು. ಅವುಗಳಲ್ಲಿ ಟೂರಿಸ್ಟ್ ಹೋಟೆಲ್ ರೂ.3,26,000/ಗಳಿಗೆ ಅತಿ ಹೆಚ್ಚಿನ ಬೆಲೆಗೆ ಬಾಡಿಗೆಗೆ ಬಹಿರಂಗ ಹರಾಜಿನಲ್ಲಿ ಅಂತಿಮ ಬಿಡ್ ಆಗಿರುತ್ತದೆ ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

## ಕೇಂದ್ರ ಸರ್ಕಾರ ವಕ್ಫಬೋರ್ಡ್ ಮಸೂದೆ ತಿದ್ದುಪಡಿ ಮಾರ್ಪಾಡು ಬೇಡ

» **ಚಳ್ಳಕೆರೆ**

ಕೇಂದ್ರ ಸರ್ಕಾರ ವಕ್ಫಬೋರ್ಡ್ ತಿದ್ದುಪಡಿ ಮಸೂದೆಯನ್ನು ಕೈಬಿಡಬೇಕೆಂದು ಒತ್ತಾಯಿಸಿ ಪ್ರಧಾನಮಂತ್ರಿಗಳಿಗೆ ಅಲ್ಪಸಂಖ್ಯಾತರ ವೇದಿಕೆ ಮನವಿ ಮಾಡಿದೆ. ಇತ್ತೀಚಿನ ದಿನಗಳಲ್ಲಿ ಕೇಂದ್ರ ಸರ್ಕಾರ ಮುಸ್ಲಿಂ ಸಮುದಾಯದ ಅಭಿವೃದ್ಧಿಗೆ ಹಿನ್ನಡೆಯಾಗುವಂತ ವಕ್ಫಬೋರ್ಡ್ ತಿದ್ದುಪಡಿಗೆ ಕೈಹಾಕಿದ್ದು ಈ ಬಗ್ಗೆ ಪ್ರಧಾನಮಂತ್ರಿಗಳು ಪುನರ್ ಪರಿಶೀಲನೆ ನಡೆಸಿ ಮುಸ್ಲಿಂ ಸಮುದಾಯಕ್ಕೆ ನ್ಯಾಯ



ಒದಗಿಸಿಕೊಡಬೇಕೆಂದು ಭಾರತೀಯ ರಾಷ್ಟ್ರೀಯ ಅಲ್ಪಸಂಖ್ಯಾತರ ಕ್ಷೇಮಾಭಿವೃದ್ಧಿ ಸಂಘ ಮನವಿ ಮಾಡಿದೆ. ಸಂಘದ ಪಾಧಿಕಾರಿಗಳಾದ ಎಸ್.ಎಚ್.ಸೈಯದ್, ಸಿ.ಆರ್. ಅಲ್ಲಾಬಕ್ಷಿ, ಎಂ.ದಾದಾಫೀರ್, ಡಿ.ಕೆ.ಮುಹಮ್ಮದ್‌ಅನ್ವರ್, ಪಿ.ಬಷೀರ್‌ಹಯಾತ್, ಎಸ್. ಮುಜೀಬುಲ್ಲಾ, ಮಾರ್ಬಲ್‌ಸಲೀಂ, ಕಲೀಂವುಲ್ಲಾ ಪ್ರಧಾನಮಂತ್ರಿಗಳಿಗೆ ತಹಶೀಲ್ದಾರ್ ಮೂಲಕ ಮನವಿ ಅರ್ಪಿಸಿದ್ಧಾರೆ.

## ಹೊಸದುರ್ಗದಲ್ಲಿ ಸಂಭ್ರಮದಿಂದ ನಡೆದ ಬಸವೇಶ್ವರ ಜಯಂತಿ.



» **ಹೊಸದುರ್ಗ**

ಪಟ್ಟಣದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹೊಸದುರ್ಗ ತಾಲ್ಲೂಕು ಘಟಕ, ವಿವಿಧ ಸಂಘಟನೆಗಳ ನೇತೃತ್ವದಲ್ಲಿ ತಾಲೂಕು ಅಧ್ಯಕ್ಷ ವಕೀಲ ಮಂಜುನಾಥ್ ನಾಯಕತ್ವದಲ್ಲಿ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ಆಚರಣೆ ಅತ್ಯಂತ ಸಂಭ್ರಮ–ಸಡಗರದಿಂದ ನಡೆಯಿತು. ಕಾರ್ಯಕ್ರಮದಲ್ಲಿ ರಾಜಕೀಯ ಮುಖಂಡರು, ವೀರಶೈವ ಲಿಂಗಾಯಿತ ಸಮಾಜದ ಬಂಧುಗಳು ಮತ್ತು ಸಾರ್ವಜನಿಕರು ಪುಷ್ಪಾರ್ಚನೆ ಮಾಡಿ, ಅರ್ಥಪೂರ್ಣವಾಗಿ ಕಾರ್ಯಕ್ರಮ ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಅನ್ನಸಂತರ್ಪಣೆ, ನಿವೃತ್ತ ಯೋಧರಿಗೆ ಸನ್ಮಾನ ಕಾರ್ಯಕ್ರಮ ಜರುಗಿತು. ಬಾಲಕ ಹೆಗ್ಗೆರೆ ಯಕ್ಷಿತ್ ಬಾಲ ಬಸವಣ್ಣನ ವೇಷಧಾರಿಯಾಗಿದ್ದು, ಕಾರ್ಯಕ್ರಮಕ್ಕೆ ಮೆರಗು ನೀಡಿತು. ಕಾರ್ಯಕ್ರಮದಲ್ಲಿ ಶಾಸಕ ಬಿ.ಜಿ ಗೋವಿಂದಪ್ಪ, ಮಹಾಸಭಾ ತಾಲೂಕು ಅಧ್ಯಕ್ಷ ಮಂಜುನಾಥ್, ಜಿಲ್ಲಾಧ್ಯಕ್ಷ ಮಹಡಿ ಶಿವಮೂರ್ತಿ, ಉಪಾಧ್ಯಕ್ಷ ಸ್ವಾಮಿ ಕಾರ್ಯದರ್ಶಿ ಸೌಮ್ಯ ಶಿವರಾಜ್, ಮಹಿಳಾ ಘಟಕದ ಅಧ್ಯಕ್ಷೆ ಸಿಂಧು, ಯುವ ಘಟಕದ ಅಧ್ಯಕ್ಷ ಮಹಾಂತೇಶ್ ಮುಖಂಡರಾದ ಶಿವುಮಠ, ಸತೀಶ್, ಮಲ್ಲಿಕಾರ್ಜುನ್, ಮಂಜುನಾಥ್ ಸೇರಿದಂತೆ ಸಂಘಟನೆಗಳ ಪದಾಧಿಕಾರಿಗಳು, ನಿರ್ದೇಶಕರು ಹಾಗೂ ವೀರಶೈವ ಲಿಂಗಾಯತ ಸೇರಿದಂತೆ ವಿವಿಧ ಜನಾಂಗಗಳ ನೂರಾರು ಜನರು ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ಖೋ ಖೋ ಪಂದ್ಯ: ಗಿರಿಯಮ್ಮ ಕಾಲೇಜ್ ತಂಡಕ್ಕೆ ತೃತೀಯ ಸ್ಥಾನ

» **ಹರಿಹರ**

ನಗರದ ಶ್ರೀಮತಿ ಗಿರಿಯಮ್ಮ ಕಾಂತಪ್ಪ ಶ್ರೇಷ್ಠಿ ಮಹಿಳಾ ಕಾಲೇಜು ತಂಡಕ್ಕೆ ಖೋ ಖೋ ಪಂದ್ಯಾವಳಿಯಲ್ಲಿ ತೃತೀಯ ಸ್ಥಾನ ಲಭಿಸಿದೆ. ಜಿಲ್ಲೆಯ ಹೊನ್ನಾಳಿ ನಗರದ ಶ್ರೀ ಮೃತ್ಯುಂಜಯ ಶಿವಾಚಾರ್ಯ ಪ್ರಥಮ ದರ್ಜೆ ಮಹಾವಿದ್ಯಾಲಯ ಹಾಗೂ ದಾವಣಗೆರೆ ವಿಶ್ವ ವಿದ್ಯಾನಿಲಯ ದೈಹಿಕ ಶಿಕ್ಷಣ ನಿರ್ದೇಶಕರ ಸಂಘದಿಂದ ಪಟ್ಟಣದ ಮಹಾವಿದ್ಯಾಲಯ ಮೈದಾನದಲ್ಲಿ ಹಮ್ಮಿಕೊಂಡಿದ್ದ ಮಹಿಳಾ ಕ್ರೀಡಾಕೂಟದ ಖೋ ಖೋ ಪಂದ್ಯಾವಳಿಯಲ್ಲಿ ಹರಿಹರ ನಗರದ ಶ್ರೀಮತಿ ಗಿರಿಯಮ್ಮ ಆರ್. ಕಾಂತಪ್ಪಶ್ರೇಷ್ಠಿ ಪ್ರಥಮ ದರ್ಜೆ ಮಹಿಳಾ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ತೃತೀಯ ಸ್ಥಾನ ಪಡೆದು ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ದೈಹಿಕ ಶಿಕ್ಷಣ ನಿರ್ದೇಶಕ ಸಂಗಪ್ಪ ಐ. ಹೆಗ್ಗೊಂಡ, ಕ್ರೀಡಾ ಸಹಾಯಕ ರಾಮಚಂದ್ರಪ್ಪ




ಭಾಗವಹಿಸಿದ್ದರು. ತೃತೀಯ ಸ್ಥಾನ ಪಡೆದ ಕಾಲೇಜು ತಂಡಕ್ಕೆ ಕಾಲೇಜು ಆಡಳಿತ ಮಂಡಳಿಯವರು, ಪ್ರಾಚಾರ್ಯರಾದ ರೋಹಿಣಿ ಎಂ.ಶಿರಹಟ್ಟಿ, ಬೋಧಕ–ಬೋಧಕೇತರ ಸಿಬ್ಬಂದಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ಕ್ರೀಡಾ ಪಟುಗಳನ್ನು ಅಭಿನಂದಿಸಿದ್ದಾರೆ.

# ರಾಷ್ಟ್ರೀಯತೆ ಎಂಬ ಪರಿಕಲ್ಪನೆಯ ಸುತ್ತಾ.......



ರಾಷ್ಟ್ರ ಎಂಬುದು ಕಲ್ಲು ಮಣ್ಣು ಬೆಟ್ಟ ಗುಡ್ಡ ನದಿ ಕಾಡುಗಳ ಒಂದು ಪ್ರದೇಶವೇ ಅಥವಾ ರಾಷ್ಟ್ರ ಎಂಬುದು ಆ ನೆಲದಲ್ಲಿ ಬದುಕುತ್ತಿರುವ ಎಲ್ಲಾ ಜೀವ ಚರಗಳ ವಾಸಸ್ಥಾನವೇ ಅಥವಾ ರಾಷ್ಟ್ರ ಎಂಬುದು ಋತುಮಾನಗಳ ಹಗಲು ರಾತ್ರಿಗಳ ಪ್ರಾಕೃತಿಕ ಸೃಷ್ಟಿಯೇ ಅಥವಾ ರಾಷ್ಟ್ರ ಎಂಬುದು ದೇವರು ಧರ್ಮ ಸಂವಿಧಾನ ಆಡಳಿತ ಮುಂತಾದ ನೀತಿ ನಿಯಮಗಳ ಪ್ರಯೋಗ ಶಾಲೆಯೇ ? ಹೀಗೆ ಹಲವಾರು ಪ್ರಶ್ನೆಗಳು ಸಹಜವಾಗಿ ಉದ್ಭವವಾಗುತ್ತದೆ.

ಬಹುಶಃ ಹೀಗೆ ಸೃಷ್ಟಿಯಾಗುವ ಎಲ್ಲಾ ಪ್ರಶ್ನೆಗಳು ಅಂಶಗಳು ಮುಂತಾದ ಎಲ್ಲವೂ ಸಮನ್ವಯಗೊಂಡ ವಿಶಾಲ ಅರ್ಥದ ಸರಳ ರೂಪವೇ ಒಂದು ರಾಷ್ಟ್ರ ಅಥವಾ ದೇಶ ಎಂದು ಪರಿಗಣಿಸಬಹುದು.

ಪ್ರಾಕೃತಿಕ ಪ್ರದೇಶ - ಜೀವಚರಗಳು ಮತ್ತು ಆಡಳಿತ ವ್ಯವಸ್ಥೆಯ ಸಮ್ಮಿಲನವೇ ದೇಶ ಎಂದು ಅತ್ಯಂತ ಸರಳವಾಗಿ ಹೇಳಬಹುದು.

ಹಾಗಾದರೆ ರಾಷ್ಟ್ರೀಯತೆ ಎಂದರೇನು ?

ರಾಷ್ಟ್ರ ಧ್ವಜ ಮತ್ತು ರಾಷ್ಟ್ರ ಗೀತೆಗೆ ಗೌರವ ನೀಡುವುದು, ರಾಷ್ಟ್ರದ ಪರವಾಗಿ ಘೋಷಣೆ ಕೂಗುವುದು, ಪ್ರತಿಭಟಿಸುವುದು, ಪ್ರತಿನಿತ್ಯ ರಾಷ್ಟ್ರದ ಜಪ ಮಾಡುವುದು ಮಾತ್ರವೇ ರಾಷ್ಟ್ರೀಯತೆಯೇ ?

ನಾವು ವಾಸಿಸುವ ರಾಷ್ಟ್ರದ ಬಗೆಗಿನ ಪ್ರಾಮಾಣಿಕ ಪ್ರೀತಿ ಗೌರವ ಅಭಿಮಾನ, ರಕ್ಷಣೆ ಸಮಯ ಸಂದರ್ಭದಲ್ಲಿ ತ್ಯಾಗ, ಒಗಟ್ಟು ಮತ್ತು ಅನಿವಾರ್ಯದಲ್ಲಿ ಪ್ರಾಣತ್ಯಾಗ ಮುಂತಾದ ಒಟ್ಟು ಭಾವಗಳ ಮೊತ್ತವೇ ರಾಷ್ಟ್ರೀಯತೆ.

ಈ ನಿಟ್ಟಿನಲ್ಲಿ ಭಾರತದ ಜನರ ( ಎಲ್ಲಾ ಜಾತಿ ಧರ್ಮ ಮತ ಪಂಥ ಭಾಷೆ ಪ್ರದೇಶಗಳನ್ನು ಒಳಗೊಂಡು ) ರಾಷ್ಟ್ರೀಯ ಪ್ರಜ್ಞೆಯ ಗುಣಮಟ್ಟ ಹೇಗಿದೆ ? ಯಾವ ದಿಕ್ಕಿನಲ್ಲಿ ಸಾಗುತ್ತಿದೆ ? ಅದರ ಆಳ ವಿಸ್ತಾರ ವ್ಯಾಪ್ತಿ ಗಟ್ಟಿತನ ನೈಜತೆ ಎಷ್ಟು ? ಅದರ ಭ್ರಮೆ ವಾಸ್ತವ ಪೊಳ್ಳುತನ ಕಪಟತನ ಅ ಸ್ವಾರ್ಥ ಎಷ್ಟು ?

ಅದರೊಳಗಿನ ರಾಜಕೀಯ ಎಷ್ಟು ?

ಜೊತೆಗೆ ರಾಷ್ಟ್ರೀಯತೆಯ ವಿರೋಧ ಪದದ ಅರ್ಥ ರಾಷ್ಟ್ರ ದ್ರೋಹ ಎಂದರೇನು ? ಅದರ ಪರಿಕಲ್ಪನೆ ಯಾವ ಅಂಶಗಳನ್ನು ಒಳಗೊಂಡಿದೆ ?

ಈ ಬಗ್ಗೆ ಈ ಕ್ಷಣದ ಅನುಭವದ ಆಧಾರದ ಮೇಲೆ ಒಂದು ಅವಲೋಕನ......

( ಇದು ಭಾರತ ಒಂದು ಗಣರಾಜ್ಯಗಳ ಒಕ್ಕೂಟವಾಗಿ ರಚನೆಯಾದ ಮತ್ತು ಸಂವಿಧಾನ ಅಂಗೀಕಾರವಾದ ದಿನದಿಂದ ಆದ ಭಾರತ ದೇಶಕ್ಕೆ ಮಾತ್ರ ಅನ್ವಯಿಸುತ್ತದೆ )

ನೇರವಾಗಿ ಮತ್ತು ಸ್ಪಷ್ಟವಾಗಿ ಹೇಳಬೇಕೆಂದರೆ....

ರಾಷ್ಟ್ರೀಯತೆಯ ಪರಿಕಲ್ಪನೆ ಸರಳವೂ ಹೌದು ಸಂಕೀರ್ಣವೂ ಹೌದು. ನೇರ ದೃಷ್ಟಿಕೋನದಿಂದ ಸಹಜವಾಗಿ ಯೋಚಿಸಿದರೆ ಒಂದು ಅರ್ಥ ಹೊಳೆಯುತ್ತದೆ. ಅದನ್ನೇ ರಾಜಕೀಯಗೊಳಿಸಿ ಸಿದ್ದಾಂತಗಳ ಹಿನ್ನೆಲೆಯಲ್ಲಿ ವಾದ ಮಾಡಿದರೆ ಹೆಚ್ಚು ಸಂಕೀರ್ಣವಾಗಿ ಭಾಸವಾಗುತ್ತದೆ. ಉದಾಹರಣೆಗೆ....

ರಾಷ್ಟ್ರೀಯ ಸ್ವಯಂ ಸೇವಕ ಸಂಘ ಮತ್ತು ಅದರ ಪರಿವಾರದವರು ಸೈದ್ಧಾಂತಿಕ ಭಿನ್ನಾಭಿಪ್ರಾಯದ ಕಾರಣದಿಂದಾಗಿ ಹೇಳುವಂತೆ ಕಮ್ಯೂನಿಸ್ಟ್‌ರು, ಮುಸ್ಲಿಂ ಕ್ರಿಶ್ಚಿಯನ್ ಸಂಘಟನೆಗಳು ಕೆಲವೊಮ್ಮೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಸೇರಿ ಕೆಲವು ರಾಜಕೀಯ ಪಕ್ಷಗಳನ್ನು ದೇಶದ್ರೋಹಿಗಳು ಎಂದು ಕರೆಯುತ್ತಾರೆ. ಅದಕ್ಕೆ ವಿರುದ್ಧವಾಗಿ ಸಂಘ ಪರಿವಾರ




ಮತ್ತು ಅದರ ಚಟುವಟಿಕೆಗಳನ್ನು ಈ ಪಕ್ಷಗಳು ಸಹ ರಾಷ್ಟ್ರ ದ್ರೋಹಿಗಳು ಎಂದೇ ಕರೆಯುತ್ತಾರೆ. ಅಂದರೆ ರಾಷ್ಟ್ರೀಯತೆ ಮತ್ತು ರಾಷ್ಟ್ರ ದ್ರೋಹ ಇಲ್ಲಿ ಹೆಚ್ಚು ಸಂಕೀರ್ಣ ಮತ್ತು ಅನುಮಾನಾಸ್ಪದವಾಗುತ್ತದೆ. ಅದರಲ್ಲೂ ಸಮೂಹ ಸಂಪರ್ಕ ಕ್ರಾಂತಿಯ ಈ ಸಂದರ್ಭದಲ್ಲಿ ಇದು ಸಾಮಾನ್ಯ ಜನರಲ್ಲಿ ಅತ್ಯಂತ ಕ್ಲಿಷ್ಟಕರ ಅರ್ಥಗಳನ್ನು ಹೊಮ್ಮಿಸುತ್ತಿದೆ. ಸರಿಯಾದ ನಿರ್ಧಾರಕ್ಕೆ ಬರದೆ ಗೊಂದಲಕ್ಕೊಳಗಾಗಿದ್ದಾರೆ.

ರಾಷ್ಟ್ರೀಯತೆ ಎಂದರೆ ರಾಷ್ಟ್ರದ ಮೇಲಿನ ಪ್ರೀತಿ ಎಂಬುದು ನಿಜ. ಆದರೆ ಅದನ್ನು ವ್ಯಕ್ತಪಡಿಸುವ ರೀತಿ ಹೇಗೆ. ಅದನ್ನು ಅಳೆಯುವ ಮಾನದಂಡ ಏನು ? ಅವರವರ ಭಾವಕ್ಕೆ ಅವರವರ ಮೂಗಿನ ನೇರಕ್ಕೆ ರಾಷ್ಟ್ರೀಯತೆ ಮತ್ತು ರಾಷ್ಟ್ರ ದ್ರೋಹವನ್ನು ಅರ್ಥೈಸುವುದಾದರೆ ಅದು ಮತ್ತೊಂದು ಸಂಘರ್ಷಕ್ಕೆ ದಾರಿ ಮಾಡಿಕೊಡುತ್ತದೆ.

ನಮ್ಮದು ಹಿಂದು ಧರ್ಮ ಅಥವಾ ಸನಾತನ ಧರ್ಮದ ಆಧಾರದಲ್ಲಿ ನಡೆಯುತ್ತಿರುವ ಅಥವಾ ನಡೆಯಬೇಕಾದ ದೇಶ ಎನ್ನುವುದು ರಾಷ್ಟ್ರೀಯತೆಯೇ ? ರಾಷ್ಟ್ರ ವಿರೋಧಿಯೇ ? ಅಪರಾಧವೇ ? ಸರಿಯಾದ ನಿಲುವೇ ?

ನಮ್ಮದು ಇಸ್ಲಾಂ ಧರ್ಮ. ನಾವು ಷರಿಯತ್ ನಿಯಮದಂತೆನಾವುಬದುಕುತ್ತೇವೆ.ಸಂವಿಧಾನವನ್ನೂ ಗೌರವಿಸುತ್ತೇವೆ. ಆದರೆ ಧಾರ್ಮಿಕ ಸ್ವಾತಂತ್ರ್ಯದ ಅಡಿಯಲ್ಲಿ ಖುರಾನ್ ನಮಗೆ ಅತ್ಯಂತ ಶ್ರೇಷ್ಠ ಎನ್ನುವ ಭಾವನೆ ಮತ್ತು ವರ್ತನೆ ರಾಷ್ಟ್ರೀಯತೆಯೇ ? ದೇಶ ದ್ರೋಹವೇ ? ಅಪರಾಧವೇ ? ಸರಿಯಾದ ನಿಲುವೇ ? ಇದೇ ರೀತಿ ಕ್ರಿಶ್ಚಿಯನ್ ಭೌದ್ದ ಜೈನ್ ಸಿಖ್ ಪಾರ್ಸಿ ಬಸವ ಧರ್ಮದ ರಾಷ್ಟ್ರ ಎಂಬ ಬಹಿರಂಗ ಭಾವನೆ ಮತ್ತು ವರ್ತನೆ ಸಂವಿಧಾನಾತ್ಮಕವಾಗಿ ಎಷ್ಟು ಸರಿ ? ಎಷ್ಟು ತಪ್ಪು ? ಎಷ್ಟು ಸಹನೀಯ ?

ಮದರಸಾಗಳಲ್ಲಿ ಖುರಾನ್, ಕ್ರಿಶ್ಚಿಯನ್ ಶಾಲೆಗಳಲ್ಲಿ ಬೈಬಲ್, ಸರ್ಕಾರಿ ಶಾಲೆಗಳಲ್ಲಿ ಭಗವದ್ಗೀತೆ ಭೋದಿಸುವುದು ಸಂವಿಧಾನಕ್ಕೆ ಮಾಡುವ ಅಪಮಾನವೇ ಅಥವಾ ಅದಕ್ಕೆ ಪೂರಕವೇ ? ಭವಿಷ್ಯದಲ್ಲಿ ಇದರ ಪರಿಣಾಮ ಊಹಿಸಿದರೆ ಇದು ರಾಷ್ಟ್ರೀಯತೆಯ ಪರಿಕಲ್ಪನೆಗೆ ಅಪಾಯಕಾರಿ ಎಂದೆನಿಸುವುದಿಲ್ಲವೇ ಎಂಬ ಪ್ರಶ್ನೆ ಉದ್ಭವಿಸುತ್ತದೆ.....

ನಾವು ಭಾರತೀಯರು ಮತ್ತು ಭಾರತದ ಸಂವಿಧಾನದ ನೀತಿ ನಿಯಮಗಳಿಗೆ ನಿಷ್ಠರು. ಅದೇ ಭಾರತದ ನಿಜವಾದ ಆತ್ಮ ಎಂದು ಪ್ರತಿಪಾದಿಸುವವರು ನಿಜವಾದ ರಾಷ್ಟ್ರೀಯವಾದಿಗಳು ಎನ್ನಬಹುದೇ.....

ದೇಶ ಮತ್ತು ಧರ್ಮದ ಆಯ್ಕೆಯಲ್ಲಿ ದೇಶ ಮೊದಲು ಎನ್ನುವವರು ರಾಷ್ಟ್ರೀಯವಾದಿಗಳು, ಧರ್ಮ ಮುಖ್ಯ ಎನ್ನುವವರು ರಾಷ್ಟ್ರ ವಿರೋಧಿಗಳು. ಎರಡೂ ಬೇಕು ಎನ್ನುವವರು ಅಪಾಯಕಾರಿಗಳು ಎಂದು ಪರಿಗಣಿಸಬಹುದೇ ಅಥವಾ ಅಥವಾ ಅದು ಅವರವರ ಭಾವ ಸ್ವಾತಂತ್ರ್ಯ ಎಂದು ನಿರ್ಲಕ್ಷಿಸಬಹುದೇ....

ಸರ್ಕಾರಿ ಸೇವಕರಾಗಿ ಸರ್ಕಾರದ ಸಂಬಳ ಪಡೆದು ತಮ್ಮ ಕಾಯಾ ವಾಚಾ ಮನಸಾ ಈ ದೇಶದ ಪ್ರಜೆಗಳ ಸೇವೆ ಮಾಡುವವರು ನಿಜವಾದ ರಾಷ್ಟ್ರೀಯವಾದಿಗಳು. ಇದನ್ನು ಹೊರತುಪಡಿಸಿ ಯಾವುದೇ ರೀತಿಯ ಲಂಚ ಮುಂತಾದ ಆಮಿಷಗಳಿವೆ ಒಳಗಾಗಿ ಜನರನ್ನು ಶೋಷಣೆಗೆ ಒಳಪಡಿಸುವವರು ಅಪರಾಧಿಗಳು ಮತ್ತು ಪರೋಕ್ಷವಾಗಿ ದೇಶದ್ರೋಹಿಗಳು ಎಂದು ಭಾವಿಸಬಹುದೇ....

ಚುನಾವಣೆಯಲ್ಲಿ ಸ್ಪರ್ಧಿಸಿ ತಮ್ಮ ಪ್ರತಿಭೆ ಸಾಮರ್ಥ್ಯ ಸೇವಾ ಮನೋಭಾವದಿಂದ ಆಯ್ಕೆಯಾಗಿ ಸಂವಿಧಾನ ಬದ್ದವಾಗಿ ನಿಷ್ಠೆಯಿಂದ ಕೆಲಸ ಮಾಡುವ ಎಲ್ಲಾ ಜನ ಪ್ರತಿನಿಧಿಗಳು ರಾಷ್ಟ್ರೀಯವಾದಿಗಳು. ಚುನಾವಣೆಯಲ್ಲಿ ಹಣ ಹೆಂಡ ಜಾತಿ ಧರ್ಮ ಸುಳ್ಳು ಭರವಸೆಗಳ ಮೂಲಕ ಆಯ್ಕೆಯಾಗುವವರು ಮತ್ತು ತದನಂತರ ತಮ್ಮ ಸ್ಥಾನದಿಂದ ಭ್ರಷ್ಟ ಮತ್ತು ಸ್ವಜನ ಪಕ್ಷಪಾತ ಮಾಡುವವರು ಅಪರಾಧಿಗಳು ಮತ್ತು ಪರೋಕ್ಷ ದೇಶ ದ್ರೋಹಿಗಳು ಎಂದು ಕರೆಯಬಹುದೇ....

ಚುನಾವಣೆಯಲ್ಲಿ ವ್ಯಕ್ತಿಯ ವ್ಯಕ್ತಿತ್ವ ಘನತೆ ಒಳ್ಳೆಯತನಗಳನ್ನು ನಿರ್ಲಕ್ಷಿಸಿ ಆತನ ಜಾತಿ ಧರ್ಮ ಹಣ ತೋಳ್ಬಲದ ಪ್ರಭಾವಕ್ಕೆ ಒಳಗಾಗಿ ಮತ ಚಲಾಯಿಸುವುದು ಕೂಡ ಅತ್ಯಂತ ಅಜ್ಞಾನ ಅಪರಾಧ ಮತ್ತು ಪರೋಕ್ಷ ದೇಶದ್ರೋಹವೇ ಎಂದೂ ಭಾವಿಸಬಹುದಲ್ಲವೇ......

ಲಾಭದ ದುರಾಸೆಯಿಂದ ನೀರು ಗಾಳಿ ಆಹಾರಗಳನ್ನು ಕಲಬೆರಕೆ ಮಾಡಿ, ಖೋಟಾ ನೋಟು ಮುದ್ರಿಸಿ ಇಡೀ ವ್ಯವಸ್ಥೆಯನ್ನು ಕಲ್ಮಶ ಮಾಡಿ ದೇಹ ಮನಸ್ಸುಗಳನ್ನು ಮಲಿನಗೊಳಿಸುವುದು ರಾಷ್ಟ್ರ ದ್ರೋಹ ಎಂದು ಪರಿಗಣಿಸಬಹುದೇ ? ಏಕೆಂದರೆ ಇದರಿಂದ ದೇಶ ದುರ್ಬಲವಾಗುವುದಿಲ್ಲವೇ ?........

ಒಬ್ಬರಿಗೊಬ್ಬರು ದ್ವೇಷಿಸುತ್ತಾ, ಬಹಿಷ್ಕಾರಗಳನ್ನು ಹಾಕುತ್ತಾ, ಅಸಹಿಷ್ಣುತೆ ವ್ಯಕ್ತಪಡಿಸುತ್ತಾ, ಆಡಳಿತ ವ್ಯವಸ್ಥೆಯನ್ನು ಪ್ರಶ್ನಿಸಿದ ಮಾತ್ರಕ್ಕೆ ಅವರನ್ನು ದೇಶದ್ರೋಹಿಗಳು ಎಂದು ಆರೋಪ ಮಾಡುತ್ತಾ, ಧರ್ಮದ ಹುಳುಕುಗಳನ್ನು ಹೇಳಿದರೆ ಅದನ್ನು ಧರ್ಮ ದ್ರೋಹ ಎನ್ನುತ್ತಾ ಇಡೀ ದೇಶದಲ್ಲಿ ಅಸಹನೀಯ ವಾತಾವರಣ ಸೃಷ್ಟಿಸುತ್ತಿರುವವರು ಮೇಲ್ನೋಟಕ್ಕೆ ರಾಷ್ಟ್ರೀಯವಾದಿಗಳು ಎನಿಸಿದರು ಆಂತರ್ಯದಲ್ಲಿ ಅವರು ದೇಶಕ್ಕೆ ಮಾರಕ ಎಂದಾಗುವುದಿಲ್ಲವೇ......

ಹೀಗೆ ದೀರ್ಘವಾಗಿ ಬೆಳೆಯುತ್ತಾ ಹೋಗುವ ಪ್ರಶ್ನೆಗಳಿಗೆ ಉತ್ತರ ಹುಡುಕುತ್ತಾ ಸಾಗಿದರೆ ರಾಷ್ಟ್ರೀಯತೆ ಮತ್ತು ರಾಷ್ಟ್ರ ದ್ರೋಹದ ವಾಸ್ತವದ ಹತ್ತಿರಕ್ಕೆ ಸಾಗಬಹುದು.


ಆದರೂ ಅತ್ಯಂತ ಸರಳವಾಗಿ ಹೇಳುವುದಾದರೆ....

ರಾಷ್ಟ್ರೀಯತೆಗೆ ಅತಿ ಹತ್ತಿರದ ಚಿಂತನೆಗಳೆಂದರೆ ಸ್ವಾಮಿ ವಿವೇಕಾನಂದರು ಪ್ರತಿಪಾದಿಸಿದ ಭಾರತೀಯತೆ ಮತ್ತು ಮಹಾತ್ಮ ಗಾಂಧಿಯವರು ನಡೆ ನುಡಿಗಳು ನಿಜಕ್ಕೂ ಭಾರತದ ರಾಷ್ಟ್ರೀಯತೆಯ ನೈಜ ಅರ್ಥವನ್ನು ಕೊಡುತ್ತದೆ. ಜೊತೆಗೆ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಅಡಕ ಮಾಡಿರುವ " ಭಾರತೀಯ ಪ್ರಜೆಗಳಾದ ನಾವು " ಎಂಬ ಪೀಠಿಕೆ ಮತ್ತು ಹಕ್ಕುಗಳು ಹಾಗು ಕರ್ತವ್ಯಗಳ ಮಾರ್ಗದರ್ಶನ ರಾಷ್ಟ್ರೀಯತೆಯ ಸ್ಪಷ್ಟ ಮತ್ತು ನಿಕಟ ಅರ್ಥವನ್ನು ಹೊಮ್ಮಿಸುತ್ತದೆ.

ಗೌತಮ ಬುದ್ದರ ಮಾನಸಿಕತೆ ಮತ್ತು ಬಸವಣ್ಣನವರ ಸಾಮಾಜಿಕತೆ ರಾಷ್ಟ್ರೀಯತೆಯ ಚಿಂತನೆಗೆ ಪೂರಕವಾಗಿ ಕೆಲಸ ಮಾಡುತ್ತದೆ.

ಇದು ಇನ್ನೂ ವಿಸ್ತಾರಗೊಳ್ಳುವ ಒಂದು ಆಳ ವಿಷಯ. ಮುಂದೆ ಈ ಬಗ್ಗೆ ಮತ್ತೊಮ್ಮೆ ಚರ್ಚಿಸೋಣ. ನಿಮ್ಮ ಅಭಿಪ್ರಾಯಗಳಿಗೆ ಮುಕ್ತ ಸ್ವಾಗತ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T